ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೨೦**

**ಒಟ್ಟು ಪ್ರಶ್ನೆಗಳು – ೭೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಶುಕ್ರವಾರ, ದಿನಾಂಕ : ೧೮ನೇ ಜುಲೈ, ೨೦೧೪**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಕಲಾಗ್ರಾಮದ ನಿರ್ದೇಶಕರ ಹುದ್ದೆ ತುಂಬುವುದು

**ಡಾ|| ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೨೯ (೧೫೯೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈಗಾಗಲೇ ಸ್ಥಾಪಿತವಾದ ಕಲಾಗ್ರಾಮವು ಸಂಪೂರ್ಣ ಪ್ರಮಾಣದಲ್ಲಿ ಇನ್ನೂ ಚಾಲನೆಯಾಗದಿರುವುದಕ್ಕೆ ಕಾರಣಗಳೇನು ;

(ಆ) ಕಲಾಗ್ರಾಮವು ಸ್ಥಾಪನೆಗೊಂಡಿದ್ದು, ಇನ್ನೂ ಇದರ ನಿರ್ದೇಶಕರ ಹುದ್ದೆಯನ್ನು ತುಂಬದಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಹಾಗಿದ್ದಲ್ಲಿ, ಈ ಹುದ್ದೆಯನ್ನು ಯಾವ ಕಾರಣಗಳಿಂದ ಸರ್ಕಾರವು ಇನ್ನೂ ತುಂಬಲಾಗಿಲ್ಲ ; ಯಾವಾಗ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡಲಾಗುವುದು ?

## ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೩೦ (೧೫೮೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಎಂದಿನಿಂದ ವೃಂದ ಮತ್ತು ನೇಮಕಾತಿ ನಿಯಮಗಳು ಜಾರಿಗೆ ಬಂದಿದೆ ;

(ಆ) ಈ ವೃಂದ ಮತ್ತು ನೇಮಕಾತಿ ೨೦೧೦ರ ಅನ್ವಯ ವಿವಿಧ ವರ್ಗದ ವೃಂದಗಳ ನೌಕರರಿಗೆ ಮುಂಬಡ್ತಿ ನೀಡುವಲ್ಲಿ ಸೇವಾ ನಿಯುವು ಪರಿಗಣಿಸದಿರುವುದು ಸರ್ಕಾರದ ಗವುನಕ್ಕೆ ಬಂದಿದೆಯೇ ;

(ಇ) ಮಂಡಳಿಯಲ್ಲಿ ಮುಂಬಡ್ತಿ ನೀಡುವಲ್ಲಿ ನೌಕರ ವರ್ಗಕ್ಕೆ ಆಗಿರುವ ಅನ್ಯಾಯ ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಮುಂಬಡ್ತಿ ನೀಡುವಾಗ ಸೇವಾ ಹಿರಿತನವನ್ನು ಪರಿಗಣಿಸದಿರುವ ಬಗ್ಗೆ ಮಾನ್ಯ ಉಚ್ಚನ್ಯಾಯಾಲಯದಲ್ಲಿ Writ Petition ಅನ್ವಯ ವಿಚಾರಣೆ ನಡೆಯುವ ಸಮಯದಲ್ಲಿ ಮುಂಬಡ್ತಿ ನೀಡಿರುವುದು ಯಾವ ನ್ಯಾಯ ; ಮಂಡಳಿಗೆ ಯಾವ ಅಧಿಕಾರವಿದೆ ಮತ್ತು ಯಾವ ನಿಯುಮವಿದೆ ; ಸರ್ಕಾರ ಇವರ ಬಗ್ಗೆ ಕ್ರಮ ಕೈಗೊಳ್ಳುವುದೇ ?

## ರಂಗಾಯಣ ನಿರ್ದೇಶನಾಲಯದ ಚಾಲನೆ

**ಡಾ|| ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೩೧ (೧೬೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ ಈಗಾಗಲೇ ಸ್ಥಾಪಿತವಾದ ರಂಗಾಯಣ ನಿರ್ದೇಶನಾಲಯವು ಸಂಪೂರ್ಣ ಪ್ರಮಾಣದಲ್ಲಿ ಇನ್ನೂ ಚಾಲನೆಯಾಗದಿರುವುದಕ್ಕೆ ಕಾರಣಗಳೇನು ;

(ಆ) ರಂಗಾಯಣ ನಿರ್ದೇಶನಾಲಯವು ಸ್ಥಾಪನೆಗೊಂಡಿದ್ದು, ಇನ್ನೂ ಇದರ ನಿರ್ದೇಶಕರ ಹುದ್ದೆಯನ್ನು ತುಂಬದಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಇದ್ದಲ್ಲಿ, ಈ ಹುದ್ದೆಯನ್ನು ಯಾವ ಕಾರಣಗಳಿಂದ ಸರ್ಕಾರವು ಇನ್ನೂ ತುಂಬಲಾಗಿಲ್ಲ ; ಯಾವಾಗ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡಲಾಗುವುದು ?

## ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಆಯುಕ್ತಾಲಯ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೩೨ (೧೫೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಪ್ರತ್ಯೇಕವಾಗಿ ಆಯುಕ್ತಾಲಯ ಅಥವಾ ನಿರ್ದೇಶನಾಲಯ ಸ್ಥಾಪನೆ ಮಾಡಲು ಐ.ಐ.ಎಂ.ಬಿ. ಸಂಸ್ಥೆಯು ಸರ್ಕಾರಕ್ಕೆ ವರದಿ ಸಲ್ಲಿಸಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ತ್ವರಿತವಾಗಿ ಆಯುಕ್ತಾಲಯ ಅಥವಾ ನಿರ್ದೇಶನಾಲಯ ಸ್ಥಾಪಿಸಲು ಯಾವಾಗ ಕ್ರಮ ವಹಿಸಲಾಗುವುದು ;

(ಇ) ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಯ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸಚಿವ ಸಂಪುಟ ನಿರ್ಣಯ ತೆಗೆದುಕೊಂಡಿದ್ದು, ಈ ಬಗ್ಗೆ ಯಾವಾಗ ಆದೇಶ ಹೊರಡಿಸಲಾಗುವುದು ?

## ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಸೆಸ್

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೩೩ (೧೫೮೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಇಲ್ಲಿಯವರೆಗೆ ಸಂದಾಯವಾದ ಸೆಸ್ ಮೊತ್ತವೆಷ್ಟು ;

(ಆ) ಕಳೆದ ೫ ವರ್ಷಗಳಲ್ಲಿ ಸೆಸ್ ಮೊತ್ತದಲ್ಲಿ ವರ್ಷವಾರು ವಿನಿಯೋಗಿಸಿರುವ ವಿವರ, ಅನುಮೋದನೆಯಾಗಿರುವ ಕ್ರಿಯಾ ಯೋಜನೆಯ ವಿವರ ಹಾಗೂ ಖರ್ಚಾದ ಹಣವೆಷ್ಟು ; ಉಳಿದಿರುವ ಸೆಸ್ ಮೊತ್ತವೆಷ್ಟು ;

(ಇ) ಸೆಸ್ ಮೊತ್ತವನ್ನು ಮಂಡಳಿಯಲ್ಲಿ ಯಾವುದಕ್ಕೆ ಉಪಯೋಗಿಸಲಾಗಿದೆ ; ಇದೆಲ್ಲವೂ ಪಾರದರ್ಶಕ ಮತ್ತು ಕಾನೂನಿನ ರೀತಿಯಲ್ಲಿ ವಿನಿಯೋಗಿಸಲಾಗಿದೆಯೇ ; ಹಾಗಿದ್ದಲ್ಲಿ ವಿವರ ಒದಗಿಸುವುದು ;

(ಈ) ಈ ಬಗ್ಗೆ ಮಹಾಲೇಖಪಾಲಕರ ಆಕ್ಷೇಪಣೆ ಇರುವುದಿಲ್ಲವೇ ; ಇದ್ದರೆ, ಆಕ್ಷೇಪದ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಅವ್ಯವಹಾರದ ಬಗ್ಗೆ ತನಿಖೆ ಮಾಡಲಾಗಿದೆಯೇ ?

# ಗಣಿಗಾರಿಕೆಯಿಂದ ನಿರ್ಮಾಣವಾಗುತ್ತಿರುವ ಅಪಾಯಕಾರಿ ಹೊಂಡಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾವರು) :–**

೧೨೩೪ (೧೫೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ನಿರಾಕ್ಷೇಪಣಾ ಪತ್ರವಿಲ್ಲದೆ ಕೆಂಪುಕಲ್ಲು, ಶಿಲೆಕಲ್ಲು ಮತ್ತು ಆವೆಮಣ್ಣು ಗಣಿಗಾರಿಕೆಯಿಂದ ಬೃಹತ್ ಗಾತ್ರದ ಅಪಾಯಕಾರಿ ಹೊಂಡಗಳು ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅಪಾಯಕಾರಿ ಹೊಂಡಗಳನ್ನು ನಿರ್ಮಾಣ ಮಾಡುತ್ತಿರುವ ಈ ರೀತಿಯ ಗಣಿಗಾರಿಕೆಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ಪರವಾನಿಗೆ ಪಡೆದು ಇಂತಹ ಅಪಾಯಕಾರಿ ಹೊಂಡಗಳನ್ನು ನಿರ್ಮಾಣ ಮಾಡುತ್ತಿರುವ ಗಣಿ ಮಾಲೀಕರಿಂದಲೇ ಇಂತಹ ಹೊಂಡಗಳನ್ನು ಮುಚ್ಚಿಸುವಂತೆ ಕ್ರಮ ಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಟ್ಯಾಂಕ್‌ಗಳ ಮೂಲಕ ನೀರು ಸರಬರಾಜು ಮಾಡುವ ಗ್ರಾಮ ಪಂಚಾಯತ್‌ಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾವರು) :–**

೧೨೩೫ (೧೫೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಿದ ಗ್ರಾಮ ಪಂಚಾಯತ್‌ಗಳು ಎಷ್ಟು ಮತ್ತು ಯಾವುವು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಈ ರೀತಿ ನೀರು ಸರಬರಾಜು ಮಾಡಲು ತಗುಲಿದ ಒಟ್ಟು ವೆಚ್ಚವೆಷ್ಟು (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು) ;

(ಇ) ಸದರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿರುವ ಗ್ರಾಮ ಪಂಚಾಯತ್‌ಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಗಳನ್ನು ರೂಪಿಸುವ ಚಿಂತನೆ ಸರ್ಕಾರಕ್ಕಿದೆಯೇ ; ಇಲ್ಲವಾದಲ್ಲಿ, ಕಾರಣವೇನು ?

## ಸ್ನಾತಕೋತ್ತರ ಪದವಿ ತರಗತಿ ಸೌಲಭ್ಯ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾವರು) :–**

೧೨೩೬ (೧೫೮೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪದವಿ ಕಾಲೇಜುಗಳಿಗೆ ಸ್ನಾತಕೋತ್ತರ ಪದವಿ ಶಿಕ್ಷಣವನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ ; ಅವುಗಳು ಯಾವುವು (ಜಿಲ್ಲಾವಾರು, ಕಾಲೇಜುವಾರು ವಿವರ ನೀಡುವುದು) ;

(ಆ) ಬೈಂದೂರು ವಿಧಾನಸಭಾ ಕ್ಷೇತ್ರದ ಶಂಕರನಾರಾಯಣ ಸರ್ಕಾರಿ ಪದವಿ ಕಾಲೇಜಿಗೆ ವಾಣಿಜ್ಯ ಸ್ನಾತಕೋತ್ತರ ಪದವಿ ಶಿಕ್ಷಣ ತರಗತಿಗಳನ್ನು ಪ್ರಾರಂಭಿಸಲು ಸಲ್ಲಿಸಿರುವ ಮನವಿಯನ್ನು ಪರಿಗಣಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ೧೫ ಎಕರೆ ವಿಸ್ತೀರ್ಣ, ಎಲ್ಲಾ ಮೂಲಭೂತ ಸೌಲಭ್ಯಗಳು ೨೩ ವರ್ಷಗಳ ಇತಿಹಾಸ ಹೊಂದಿರುವ ಸಾಕಷ್ಟು ಬೋಧಕ ಸಿಬ್ಬಂದಿಗಳಿದ್ದು, ಅದರಲ್ಲಿ ಇಬ್ಬರು ಪಿ.ಎಚ್.ಡಿ. ಗಳಿಸಿದ್ದು, ಎಲ್ಲಾ ರೀತಿಯ ಅರ್ಹತೆಯನ್ನು ಹೊಂದಿರುವುದರಿಂದ ಶಂಕರನಾರಾಯಣ ಸರ್ಕಾರಿ ಪದವಿ ಕಾಲೇಜಿನಲ್ಲಿ ಸ್ನಾತಕೋತ್ತರ ಪದವಿ ಆರಂಭಿಸುವ ಮನವಿಯನ್ನು ಪರಿಗಣಿಸಲಾಗುವುದು ?

## ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕೊರತೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೩೭ (೧೫೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿರುವ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಶಾಲೆಗಳಲ್ಲಿ ಒಂದನೇ ತರಗತಿಗೆ ದಾಖಲಾದ ಒಟ್ಟು ಮಕ್ಕಳ ಸಂಖ್ಯೆ ಎಷ್ಟು (ತಾಲ್ಲೂಕುವಾರು, ಶಾಲೆವಾರು ವಿವರ ನೀಡುವುದು) ;

(ಆ) ಜಿಲ್ಲೆಯಲ್ಲಿರುವ ಖಾಸಗಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಶಾಲೆಗಳಿಗೆ ಒಂದನೇ ತರಗತಿಗೆ ದಾಖಲಾದ ಒಟ್ಟು ಮಕ್ಕಳ ಸಂಖ್ಯೆ ಎಷ್ಟು (ತಾಲ್ಲೂಕುವಾರು, ಶಾಲೆವಾರು ವಿವರ ನೀಡುವುದು) ;

(ಇ) ಜಿಲ್ಲೆಯಲ್ಲಿರುವ ಅನುದಾನಿತ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಶಾಲೆಗಳಿಗೆ ಒಂದನೇ ತರಗತಿಗೆ ದಾಖಲಾದ ಮಕ್ಕಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಈ) ರಾಜ್ಯದಲ್ಲಿ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯಲ್ಲಿ ಕೊರತೆಯಾಗಲು ಕಾರಣವೇನು ; ಈ ಕೊರತೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

03381-2

## ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಬೋಧಕ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೨೩೮ (೧೫೭೭೮) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು (ವಿಷಯವಾರು ಮಾಹಿತಿ) ;

(ಆ) ಸದರಿ ಬೋಧಕ ಹುದ್ದೆಗಳು ಎಂದಿನಿಂದ ಖಾಲಿ ಇವೆ ;

(ಇ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ವಹಿಸುತ್ತದೆ ?

## ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೨೩೯ (೧೫೭೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಖಾಲಿ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಬೇಕಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಯಾವ ಕಾಲದಿಂದ ಖಾಲಿ ಇವೆ ;

(ಈ) ಯಾವ ಕಾಲಮಿತಿಯಲ್ಲಿ ಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ ?

## ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೪೦ (೧೫೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರ ಕಾರಣಗಳಿಂದ ಇದುವರೆವಿಗೆ ತೆರವಾದ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು (ವರ್ಗವಾರು ಮಾಹಿತಿ) ;

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳೊಡನೆ) ;

(ಇ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ವಹಿಸುತ್ತದೆ ?

## ಪ್ರೌಢಶಾಲೆಗಳ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಬಡ್ತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೪೧ (೧೫೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢಶಾಲೆಗಳ ಸಹ ಶಿಕ್ಷಕರಿಗೆ ಪದವಿಪೂರ್ವ ಕಾಲೇಜುಗಳಿಗೆ ಉಪನ್ಯಾಸಕರಾಗಿ ಬಡ್ತಿ ನೀಡಲಾಗುತ್ತಿದೆಯೇ ;

(ಆ) ಸದರಿ ಬಡ್ತಿ ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು ; ಎಂದಿನಿಂದ ಪರಿಷ್ಕರಣೆ ಮಾಡಲಾಗಿದೆ (ವಿವರಗಳೊಡನೆ) ;

(ಇ) ಸದರಿ ಜಾರಿಯಲ್ಲಿರುವ ಮಾನದಂಡ ಅನುಸರಿಸಿ ಎಷ್ಟು ಮಂದಿಗೆ ಬಡ್ತಿ ನೀಡಲಾಗಿದೆ (ವಿಷಯವಾರು ವಿವರ) ;

(ಈ) ಪದವಿಪೂರ್ವ ಕಾಲೇಜುಗಳಲ್ಲಿ ಬಡ್ತಿಯಿಂದ ಭರ್ತಿ ಮಾಡಬೇಕಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಯಾವ ಸಮಯದಿಂದ ಈ ಹುದ್ದೆಗಳು ಖಾಲಿ ಇವೆ (ವಿಷಯವಾರು ಮಾಹಿತಿ) ;

(ಉ) ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಕಾಲೇಜುಗಳಲ್ಲಿ ಹೊಸ ಕೋರ್ಸುಗಳ ಪ್ರಾರಂಭ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೧೨೪೨ (೧೫೭೫) ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಾಂಪ್ರದಾಯಿಕ ಪದವಿ ಹಾಗೂ ಸ್ನಾತಕೋತ್ತರ ಪದವಿಗಳ ಬೇಡಿಕೆ ಕಡಿಮೆಯಾಗುತ್ತಿರುವ ಈ ಸಂದರ್ಭದಲ್ಲಿ ರಾಜ್ಯ ಸರ್ಕಾರ ಯಾವ ಯಾವ ವಿಶ್ವವಿದ್ಯಾಲಯ ವ್ಯಾಪ್ತಿಯ ಯಾವ ಯಾವ ಕಾಲೇಜುಗಳಲ್ಲಿ ಬೇಡಿಕೆಗನುಗುಣವಾದ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಮುಂದಾಗಿರುತ್ತದೆ ;

(ಆ) ಇಂತಹ ಕೋರ್ಸ್‌ಗಳ ಪ್ರಾರಂಭಕ್ಕೆ ಯುಜಿಸಿ ವಿಶೇಷ ಅನುದಾನ ನೆರವು ನೀಡಲಿದೆಯೇ ; ಆ ಮೊತ್ತ ಎಷ್ಟು ಇದಕ್ಕಾಗಿ ರಾಜ್ಯದ ಯಾವ ವಿಶ್ವವಿದ್ಯಾಲಯ ವ್ಯಾಪ್ತಿಯ ಯಾವ ಕಾಲೇಜುಗಳನ್ನು ಗುರುತಿಸಲಾಗಿದೆ ಹಾಗೂ ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಕೋರ್ಸ್‌ಗಳು ಯಾವುವು ;

(ಇ) ಬಿ. ವೊಕೇಷನ್ ಕೋರ್ಸ್‌ನಲ್ಲಿರುವ ವಿಷಯಗಳು ಯಾವುವು ; ಇದಕ್ಕೆ ಪ್ರತ್ಯೇಕ ಪಠ್ಯಕ್ರಮಗಳನ್ನು ಅಳವಡಿಸಲಾಗುವುದೇ ; ಇದು ಉದ್ಯೋಗಾಧಾರಿತ ಕೋರ್ಸ್ ಎಂಬುದು ನಿಜವೇ ;

(ಈ) ಈ ಕೋರ್ಸ್‌ನ ಅವಧಿ ಹಾಗೂ ಇದು ನೇರ ಉದ್ಯಮದ ಜೊತೆ ಸಂಪರ್ಕದಲ್ಲಿರುವ ನಿಟ್ಟಿನಲ್ಲಿ ಚಿಂತನೆ ನಡೆಸಲಾಗಿದೆಯೇ ; ಬೆಂಗಳೂರು ವಿಶ್ವವಿದ್ಯಾಲಯದಡಿ ಈ ಕೋರ್ಸ್ ಪ್ರವೇಶಕ್ಕೆ ಅನುಮತಿ ಪಡೆದ ಕಾಲೇಜುಗಳು ಯಾವುವು ; ಪ್ರವೇಶ ಸಂಖ್ಯೆ, ಕೋರ್ಸ್ ಅವಧಿ ಇತ್ಯಾದಿ ವಿವರಗಳನ್ನು ನೀಡುವುದು ;

(ಉ) ಇವುಗಳ ಜೊತೆ ಹಾಲಿ ಇರುವ ಹಳೆಯ ಕೋರ್ಸ್‌ಗಳ ಪುನರುಜ್ಜೀವನಕ್ಕೆ ಹಾಗೂ ಕೋರ್ಸ್ ಬದಲಾವಣೆ, ಪಠ್ಯಕ್ರಮ ಬದಲಾವಣೆ ಅಥವಾ ಕೋರ್ಸ್‌ಗಳ ಶೈಕ್ಷಣಿಕ ಅವಧಿಯ ಪರಿಷ್ಕರಣೆಗೆ ಸರ್ಕಾರ ಮುಂದಾಗಿದೆಯೇ (ವಿವರ ನೀಡುವುದು) ?

## ಮಕ್ಕಳ ಪೌಷ್ಠಿಕ ಆಹಾರದ ಕೊರತೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೩ (೧೫೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಮಕ್ಕಳು ಪೌಷ್ಠಿಕ ಆಹಾರದ ಕೊರತೆಯಿಂದ ನರಳುತ್ತಿದ್ದಾರೆ ಹಾಗೂ ಜೀವ ಕಳೆದು ಕೊಂಡಿದ್ದಾರೆ ;

(ಆ) ಸರ್ಕಾರ ಮಕ್ಕಳ ಅಭಿವೃದ್ಧಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಇ) ರಾಜ್ಯದಲ್ಲಿ ಇದುವರೆವಿಗೆ ಪೌಷ್ಠಿಕ ಆಹಾರದ ಕೊರತೆಯಿಂದ ಜೀವ ಕಳೆದುಕೊಂಡಿರುವ ಹಾಗೂ ನರಳುತ್ತಿರುವ ಮಕ್ಕಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಈ) ಈ ಬಗ್ಗೆ ಇಲಾಖೆ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳೇನು ?

## ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೪ (೧೬೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಯೋಜನೆಯಡಿಯಲ್ಲಿ ಯಾವ ಯಾವ ರಸ್ತೆಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ (ತಾಲ್ಲೂಕುವಾರು ಮತ್ತು ವರ್ಷವಾರು ವಿವರ ನೀಡುವುದು);

(ಆ) ಇದುವರೆವಿಗೂ ಎಷ್ಟು ಕಿ.ಮೀ. ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ; ಅಭಿವೃದ್ಧಿಗಾಗಿ ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಖರ್ಚು ಮಾಡಲಾಗಿದೆ (ತಾಲ್ಲೂಕುವಾರು ಮತ್ತು ಜಿಲ್ಲಾವಾರು, ರಸ್ತೆಗಳವಾರು ಗುತ್ತಿಗೆದಾರರ ಹೆಸರು, ವಿಳಾಸ ಸಹಿತ ಮಾಹಿತಿ (ನೀಡುವುದು)?

## ಸಿದ್ಧಾಪುರ ತಾಲ್ಲೂಕಿನಲ್ಲಿ ವಸತಿ ಯೋಜನೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೫ (೧೫೭೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಉತ್ತರ ಕನ್ನಡ ಜಿಲ್ಲೆ ಸಿದ್ಧಾಪುರ ತಾಲ್ಲೂಕಿನಲ್ಲಿ ಆಶ್ರಯ, ಇಂದಿರಾ ಆವಾಜ್, ಬಸವ, ಇಂದಿರಾ ಯೋಜನೆ ಅಡಿಯಲ್ಲಿ ನಿರ್ಮಿಸಿದ ಮನೆಗಳ ಸಂಖ್ಯೆ ಫಲಾನುಭವಿಗಳ ವಿವರ, ಪಂಚಾಯತ್‌ವಾರು ನೀಡುವುದು;

(ಆ) ಈ ಮನೆಗಳ ಜಿ.ಪಿ.ಆರ್.ಎಸ್. ಹಾಗೂ ಅದಕ್ಕೆ ಅವರು ನೀಡಿದ R.T.C. ಹಾಗೂ ಇನ್ನುಳಿದ ಪ್ರತಿಗಳನ್ನು ನೀಡುವುದು;

(ಇ) ಈ ಯೋಜನೆಯಲ್ಲಿ ನಿರ್ಮಿಸಿದ ಮನೆಗಳು ದಾಖಲೆಯ ರೀತ್ಯಾ ಅದೇ ಜಾಗದಲ್ಲಿ ನಿರ್ಮಿಸಿದೆಯೇ; ಇದ್ದರೆ, ಅದರ ದೃಢೀಕರಣ ಪತ್ರವನ್ನು ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅವರುಗಳಿಂದ ದೃಢೀಕರಿಸಿ ನೀಡುವುದು;

(ಈ) ಈ ಯೋಜನೆಗಳಲ್ಲಿ ಫಲಾನುಭವಿಗಳು ಆಯ್ಕೆ ಆಗಿಯೂ ನಿರ್ಮಿಸದೆ ಉಳಿದಿರುವ ಮನೆಗಳ ಸಂಖ್ಯೆ ಎಷ್ಟು; ಇದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಅಂಧ ಮತ್ತು ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೬ (೧೫೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಧ ಮತ್ತು ಬುದ್ಧಿಮಾಂದ್ಯ ಮಕ್ಕಳ ಸರ್ಕಾರಿ ವಸತಿ ಶಾಲೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು);

(ಆ) ಸದರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು; ಎಂದಿನಿಂದ ಖಾಲಿ ಇವೆ (ವರ್ಗಾವಾರು ಮಾಹಿತಿ ನೀಡುವುದು);

(ಇ) ಖಾಲಿ ಇರುವ ಬೋಧಕ/ಬೋಧಕೇತರರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

## ನರೇಗಾ ಯೋಜನೆ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೪೭ (೧೫೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರೇಗಾ ಕ್ರಿಯಾ ಯೋಜನೆ ಅಡಿಯಲ್ಲಿ ಬೆಳಗಾಂ ಜಿಲ್ಲೆಗೆ ಹಾಕಿಕೊಂಡಿರುವ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿವೆಯೇ;

(ಆ) ಇಲ್ಲದಿದ್ದಲ್ಲಿ ಕಾರಣಗಳೇನು; ಇವುಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಇ) ನರೇಗಾ ಯೋಜನೆಯಡಿ ನಿಗದಿಪಡಿಸಲಾದ ಉದ್ಯೋಗ ಭೇಟಿ ಮೊತ್ತ ಕಡಿಮೆಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೨೪೮ (೧೫೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರಕಾರಿ ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು;

(ಆ) ಈ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರಲು ಕಾರಣಗಳೇನು;

(ಇ) ಈ ಹುದ್ದೆಗಳು ಖಾಲಿ ಇರುವುದರಿಂದ ಆಯಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಶಿಕ್ಷಣ ಮಟ್ಟ ಕುಂಠಿತವಾಗುತ್ತಿದ್ದು, ಈ ಹುದ್ದೆಗಳನ್ನು ತುಂಬಲು ಸರಕಾರ ಏನು ಕ್ರಮ ಕೈಗೊಂಡಿದೆ?

03351-3

## ಅತಿಥಿ ಉಪನ್ಯಾಸಕರ ನೇಮಕ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೨೪೯ (೧೫೬೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವಲ್ಲಿ ಇರುವ ಯುಜಿಸಿ ಮಾನದಂಡಗಳೇನು;

(ಆ) ಅತಿಥಿ ಉಪನ್ಯಾಸಕರಿಗೆ ನೀಡಬಹುದಾದ ಸಂಭಾವನೆಯ ಕುರಿತಾಗಿ ಇರುವ ಯುಜಿಸಿಯ ಮಾನದಂಡಗಳೇನು;

(ಇ) ಅತಿಥಿ ಉಪನ್ಯಾಸಕರಿಗೆ ಯುಜಿಸಿ ಮಾನದಂಡದಂತೆ ಸಂಭಾವನೆ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು?

## ದೈಹಿಕ ಶಿಕ್ಷಕರ ನೇಮಕಾತಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೨೫೦ (೧೫೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ (ಜಿಲ್ಲಾವಾರು ವಿವರ ನೀಡುವುದು);

(ಆ) ಪ್ರಾಥಮಿಕ ಶಾಲಾ ಮತ್ತು ಪ್ರೌಢ ಶಾಲಾ ಹಂತದಲ್ಲಿ ಶಿಕ್ಷಣದ ಜೊತೆಯಲ್ಲಿ ಆಟೋಟವು ಮುಖ್ಯವಾಗಿರುವುದರಿಂದ ದೈಹಿಕ ಶಿಕ್ಷಕರ ನೇಮಕಾತಿಯ ಕುರಿತು ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

# ಕೇಂದ್ರ ಪಠ್ಯಕ್ರಮ ಹೊಂದಿರುವ ಶಾಲೆಗಳ ಬಗ್ಗೆ ಆಯುಕ್ತರ ದ್ವಂದ್ವ ಸುತ್ತೋಲೆಗಳು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೨೫೧ (೧೫೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಪಠ್ಯಕ್ರಮ ಶಾಲೆಗಳು ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುತ್ತವೆ ಎಂದು ದಿನಾಂಕ ೧೮-೧೧-೨೦೧೩ ರಂದು ಆಯುಕ್ತರು ಸುತ್ತೋಲೆ ಹೊರಡಿಸಿರುವುದು ನಿಜವೇ;

(ಆ) ಕೇಂದ್ರ ಪಠ್ಯಕ್ರಮದ ಶಾಲೆಗಳು ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವುದಿಲ್ಲ ಎಂದು ದಿನಾಂಕ ೧೪-೦೨-೨೦೧೪ ರಂದು ಆಯುಕ್ತರು ಸುತ್ತೋಲೆ ಹೊರಡಿಸಿರುವುದು ನಿಜವೇ;

(ಇ) ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯವು ದಾವೆ ಸಂಖ್ಯೆ ೩೪೧೯೨/೨೦೦೯ (ಇ.ಡಿ.ಎನ್.) ಹಾಗೂ ಇತರೆ ದಾವೆಗಳಲ್ಲಿ ದಿನಾಂಕ ೧೦-೦೧-೨೦೧೧ ರಂದು "Insertion of section 1(iii-a) in the Karnataka Education Act as amended by Karnataka Act 8 of 1988 is hereby quashed as discriminatory and violative of Article 14 of the Constitution of India" ಎಂದು ಆದೇಶಿಸಿದ್ದರೂ ಕರ್ನಾಟಕ ಶಿಕ್ಷಣ ಅಧಿನಿಯಮ ೧೯೮೩ರ ಸೆಕ್ಷನ್ 1(iii-a) ಯನ್ನು ತೆಗೆದುಹಾಕಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಒಂದೇ ತರಹದ ಶಿಕ್ಷಣ ಸಂಸ್ಥೆಗಳಿಗೆ ಅಂದರೆ ಕೇಂದ್ರ ಪಠ್ಯಕ್ರಮದ ಶಾಲೆಗಳ ಬಗ್ಗೆ ದ್ವಂದ್ವ ನಿಲುವಿನ ಸುತ್ತೋಲೆ ಹೊರಡಿಸಲು ಕಾರಣಗಳೇನು;

(ಉ) ಈ ದ್ವಂದ್ವ ನಿಲುವಿನ ಸುತ್ತೋಲೆ ಹೊರಡಿಸಿದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಊ) ಕಾನೂನಿಗೆ ತಿದ್ದುಪಡಿ ತರಲು ಯಾವ ಕಾಲಮಿತಿಯನ್ನು ಸರ್ಕಾರ ಹಾಕಿಕೊಂಡಿದೆ?

## ಕನ್ನಡ ಮಾಧ್ಯಮ ಶಿಕ್ಷಣಕ್ಕೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯದ ತೀರ್ಪು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೨೫೨ (೧೫೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮಾಧ್ಯಮ ಶಿಕ್ಷಣಕ್ಕೆ ಸಂಬಂಧಿಸಿದಂತೆ ಇತ್ತೀಚೆಗೆ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ಮುಖ್ಯಾಂಶಗಳೇನು;

(ಆ) ಈಗಾಗಲೇ ಆಂಗ್ಲ ಮಾಧ್ಯಮದಲ್ಲಿ ಸರ್ಕಾರದ ಅನುಮತಿ ಇಲ್ಲದೇ ತರಗತಿಯನ್ನು ನಡೆಸುತ್ತಿರುವ ಶಾಲಾ ಆಡಳಿತ ಮಂಡಳಿಗಳ ಮೇಲೆ ಯಾವ ರೀತಿಯ ನಿಯಮ ನಿಬಂಧನೆಗಳನ್ನು ವಿಧಿಸುವ ಯೋಜನೆ ಇದೆ;

(ಇ) ಸರ್ಕಾರಿ ಶಾಲೆಗಳಲ್ಲೂ ೧ನೇ ತರಗತಿಯಿಂದ ಆಂಗ್ಲ ಮಾಧ್ಯಮವನ್ನು ಬೋಧನೆ ಮಾಡಲು ಸರ್ಕಾರ ಯೋಚಿಸಿದೆಯೇ?

## ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಬಡ್ತಿ ಹೊಂದಿದ ಶಿಕ್ಷಕರ ಕಾಲಮಿತಿ ಬಡ್ತಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೨೫೩ (೧೫೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲಾ ಶಿಕ್ಷಕರು, ಪ್ರೌಢ ಶಾಲಾ ಶಿಕ್ಷಕರಾಗಿ ಬಡ್ತಿ ಹೊಂದಿದ ನಂತರ, ಅವರಿಗೆ ಕಾಲಮಿತಿ ಬಡ್ತಿ ದೊರೆಯದಿರುವ ಹಿನ್ನೆಲೆಯಲ್ಲಿ ಬಡ್ತಿ ಹೊಂದಿದ ಈ ಶಿಕ್ಷಕರು ಅವರ ಜೊತೆಗಾರ ಪ್ರಾಥಮಿಕ ಶಾಲಾ ಶಿಕ್ಷಕರಿಗಿಂತಲೂ ಕಡಿಮೆ ವೇತನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಅನ್ಯಾಯ ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಪ್ರೊ. ವೈದ್ಯನಾಥನ್ ವರದಿ ಜಾರಿಗೊಳಿಸುವುದು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೨೫೪ (೧೫೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೈಹಿಕ ಶಿಕ್ಷಕರಿಗೆ ಪ್ರೊ. ವೈದ್ಯನಾಥನ್ ವರದಿ ಜಾರಿಗೊಳಿಸಲು ಸರ್ಕಾರ ನಿರ್ಧರಿಸಿದೆಯೇ; ಈ ವರದಿಯ ಪ್ರಮುಖಾಂಶಗಳೇನು;

(ಆ) ದೈಹಿಕ ಶಿಕ್ಷಕರಿಗೆ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರ ಸ್ಥಾನಕ್ಕೆ ಬಡ್ತಿ ನೀಡಲು ಸೂಕ್ತ ಸಿ ಮತ್ತು ಆರ್ ನಿಯಮಾವಳಿಯಲ್ಲಿ ಬದಲಾವಣೆ ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ, ನಿಯಮಾವಳಿಯ ಬದಲಾವಣೆಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು?

## ಬೆಳಗಾವಿ ವಿಮಾನ ನಿಲ್ದಾಣವನ್ನು ಮೇಲ್ದರ್ಜೆಗೇರಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೨೫೫ (೧೫೬೨) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ವಿಮಾನ ನಿಲ್ದಾಣವನ್ನು ಮೇಲ್ದರ್ಜೆಗೇರಿಸಿ, ಬೋಯಿಂಗ್ ವಿಮಾನಗಳನ್ನು ಇಳಿಸಲು ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರದಿಂದ ಒತ್ತಾಯ ತರಲಾಗುವುದೇ;

(ಆ) ವಿಮಾನ ನಿಲ್ದಾಣದ ಸಮೀಪದಲ್ಲಿ ವಿದ್ಯುತ್ ಕಂಬ ಸ್ಥಳಾಂತರ, ರಸ್ತೆ ಅತಿಕ್ರಮಣ ಮತ್ತು ಅನಧಿಕೃತ ಮನೆ ತೆರವು ಆಗಬೇಕಾಗಿದ್ದು, ಸರ್ಕಾರ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವುದೇ;

(ಇ) ಬೋಯಿಂಗ್ ವಿಮಾನ ಇಳಿಸಲು ಎಷ್ಟು ಎಕರೆ ಜಮೀನು ಬೇಕು; ಈಗ ಎಷ್ಟು ಎಕರೆ ಭೂಮಿ ವಶಪಡಿಸಿಕೊಳ್ಳಲಾಗಿದೆ; ಇನ್ನು ಎಷ್ಟು ಎಕರೆ ಜಮೀನು ಬೇಕು; (ವಿವರ ನೀಡುವುದು) ಹಾಗೂ ಉಳಿದ ಜಮೀನನ್ನು ವಶಪಡಿಸಿಕೊಳ್ಳುವ ಪ್ರಕ್ರಿಯೆ ಯಾವ ಹಂತದಲ್ಲಿದೆ;

(ಈ) ಬೆಳಗಾವಿ ವಿಮಾನ ನಿಲ್ದಾಣದಲ್ಲಿ ವಿಮಾನ ದುರಸ್ತಿ ಹಾಗೂ ತರಬೇತಿ ಕೇಂದ್ರ ಕೈಗೊಳ್ಳಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ;

(ಉ) ಬೆಳಗಾವಿ ವಿಮಾನ ನಿಲ್ದಾಣವನ್ನು ಸರ್ವ ರೀತಿಯಿಂದ ಅಭಿವೃದ್ಧಿ ಪಡಿಸಬೇಕು ಎಂದು ಕೇಂದ್ರ ಸರ್ಕಾರದ ಮೇಲೆ ಒತ್ತಾಯ ತರಲಾಗುವುದೇ; ಈ ವಿಮಾನ ನಿಲ್ದಾಣವನ್ನು ಅಭಿವೃದ್ಧಿ ಪಡಿಸುವ ಬಗ್ಗೆ ಸವಿಸ್ತಾರ ಮಾಹಿತಿ ಒದಗಿಸುವುದು;

(ಊ) ವಿಮಾನಯಾನ ಇಲಾಖೆಗೆ ಅಗತ್ಯವಿರುವ ಭೂಮಿಯನ್ನು ರಾಜ್ಯ ಸರ್ಕಾರ ಉಚಿತವಾಗಿ ನೀಡಿದ ಸಂಗತಿ ನಿಜವೇ (ವಿವರ ನೀಡುವುದು)?

**ಅರ್ಹ ಫಲಾನುಭವಿಗಳಿಗೆ ವಸತಿ ಸೌಕರ್ಯ**

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೫೬ (೧೫೬೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಅರ್ಹ ಸಾರ್ವಜನಿಕರಿಗೆ ವಸತಿ ಸೌಕರ್ಯ ಮತ್ತು ನಿವೇಶನವನ್ನು ವಿತರಿಸಲು ಕರ್ನಾಟಕ ಗೃಹ ಮಂಡಳಿ ಹಾಗೂ ಇನ್ನಿತರ ವಸತಿ ನಿಗಮಗಳು ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ (ತಾಲ್ಲೂಕುವಾರು ವಿವರ ನೀಡುವುದು);

(ಆ) ಕಳೆದ ೩ ವರ್ಷಗಳಲ್ಲಿ ಬಡ ಅರ್ಹ ಫಲಾನುಭವಿಗಳಿಗೆ ವಸತಿ ಸೌಕರ್ಯ ಮತ್ತು ನಿವೇಶನಗಳನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು; ಸದರಿ ಮಂಡಳಿಗಳಿಂದ ಹೊಸ ಯೋಜನೆಗಳನ್ನು ಆರಂಭಿಸಲಾಗಿದೆಯೇ (ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು)?

## ಅಂಬೇಡ್ಕರ್ ಮತ್ತು ಬಸವ ವಸತಿ ಯೋಜನೆಯ ಅನುದಾನ ಹಂಚಿಕೆಯಲ್ಲಿ ತಾರತಮ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೫೭ (೧೫೫೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಬೇಡ್ಕರ್ ವಸತಿ ಯೋಜನೆ ಯಾವ ವರ್ಗದ ಜನರಿಗೆ ನೀಡಲಾಗುತ್ತಿದೆ;

(ಆ) ಅಂಬೇಡ್ಕರ್ ವಸತಿ ಯೋಜನೆ ಮತ್ತು ಬಸವ ವಸತಿ ಯೋಜನೆಗೆ ಸರ್ಕಾರ ನಿಗದಿಪಡಿಸಿದ ಅನುದಾನದಲ್ಲಿ ತಾರತಮ್ಯವಿದೆಯೇ (ವಿವರ ನೀಡುವುದು);

(ಇ) ತಾರತಮ್ಯವಿದ್ದಲ್ಲಿ, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು);

(ಉ) ಅಂಬೇಡ್ಕರ್ ವಸತಿ ಯೋಜನೆ ಮತ್ತು ಬಸವ ವಸತಿ ಯೋಜನೆ ನೀಡಲು ಸರ್ಕಾರದ ಮಾನದಂಡವೇನು (ಪೂರ್ಣ ವಿವರ ನೀಡುವುದು)?

## ಬ್ಯಾಕ್‌ಲಾಗ್ ನೇಮಕಾತಿ ಆಗಿದ್ದರೂ ಕರ್ತವ್ಯ ನಿರ್ವಹಣೆಗೆ ತೆಗೆದುಕೊಳ್ಳದಿರುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೫೮ (೧೫೫೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶ್ರೀ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ (ರಿ) ಚಿತ್ರದುರ್ಗ ಇದರ ಅನುದಾನಿತ ಪದವಿ ಕಾಲೇಜಿನಲ್ಲಿ ೨೦೦೩ರ ಶೈಕ್ಷಣಿಕ ಅವಧಿಯಲ್ಲಿ ಪರಿಶಿಷ್ಟ ಜಾತಿಗೆ ಮೀಸಲಿದ್ದ ಬ್ಯಾಕ್‌ಲಾಗ್ ಸಮಾಜಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅರ್ಹ ಅಭ್ಯರ್ಥಿಯನ್ನು ಸದರಿ ಹುದ್ದೆಗೆ ನೇಮಕ ಮಾಡಿಕೊಂಡಿದ್ದಾಗ್ಯೂ ಕೂಡಾ ಕರ್ತವ್ಯಕ್ಕೆ ತೆಗೆದುಕೊಳ್ಳುವಲ್ಲಿ ವಿಳಂಬ ಧೋರಣೆ ಹಾಗೂ ಮೀನಾಮೇಷ ಎಣಿಸುತ್ತಿರುವುದು ನಿಜವೇ;

(ಇ) ಇದಕ್ಕೆ ಕಾರಣವೇನು; ಈ ಬಗ್ಗೆ ಆಡಳಿತ ಮಂಡಳಿಗೆ ಸರ್ಕಾರ ಆದೇಶಿಸಿದ್ದರೂ ಅದನ್ನು ಪಾಲಿಸದಿರುವ ಬಗ್ಗೆ ಸರ್ಕಾರದ ನಿಲುವೇನು;

(ಈ) ಕಳೆದ ೧೨ ವರ್ಷಗಳಿಂದಲೂ ನಡೆಯುತ್ತಿರುವ ಇಂತಹ ಪ್ರಕ್ರಿಯೆಯ ಘಟನಾವಳಿಗಳಿಂದ ಒಬ್ಬ ಅರ್ಹ ಸಮಾಜಶಾಸ್ತ್ರ ಉಪನ್ಯಾಸಕರಾಗುವ ಪರಿಶಿಷ್ಟ ಜಾತಿ ಅಭ್ಯರ್ಥಿಗೆ ಅನ್ಯಾಯವಾದಂತಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ;

03381-4

(ಉ) ಹಾಗಿದ್ದಲ್ಲಿ, ನ್ಯಾಯ ವಿಳಂಬದಿಂದ ತೊಳಲಾಟದಲ್ಲಿರುವ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಲು ಸರ್ಕಾರ ಮುಂದಾಗುವುದೇ; ಯಾವಾಗ ಸದರಿ ಹುದ್ದೆಯ ನೇಮಕಾತಿ ಆದೇಶವನ್ನು ಹೊರಡಿಸಲು ಆಡಳಿತ ಮಂಡಳಿಗೆ ನಿರ್ದೇಶಿಸಲಾಗುತ್ತದೆ; ಇಲ್ಲದಿದ್ದಲ್ಲಿ ಕಾರಣಗಳೇನು (ತಿಳಿಸುವುದು)?

## ಸರ್ಕಾರಿ ಅನುದಾನಿತ ಕಾಲೇಜುಗಳ ಸಿಬ್ಬಂದಿಗಳಿಗೆ ಹೆರಿಗೆ ರಜೆಯ ತಾರತಮ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೫೯ (೧೪೫೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಕಾಲೇಜುಗಳಲ್ಲಿ ಮಹಿಳಾ ಸಿಬ್ಬಂದಿಗಳಿಗೆ ಎಷ್ಟು ದಿನಗಳ ಹೆರಿಗೆ ರಜೆಯನ್ನು ನೀಡಲಾಗುತ್ತಿದೆ ;

(ಆ) ಹೆರಿಗೆ ರಜೆಯಂತೆ ಅನ್ಯ ಸೌಲಭ್ಯ ನೀಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಹಿಳಾ ಸಿಬ್ಬಂದಿಗಳಿಗೆ ಹೆರಿಗೆ ರಜೆ ನೀಡುವಾಗ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಸಿಬ್ಬಂದಿಗಳಿಗೆ ಬೇರೆ ಬೇರೆ ರೀತ್ಯಾ ನಿಗದಿಪಡಿಸಲಾಗಿದೆಯೇ ; (ಸರ್ಕಾರಿ ಅನುದಾನಿತ ಶಾಲೆಗಳ ಪೂರ್ಣ ವಿವರ ನೀಡುವುದು)

(ಈ) ಬೇರೆ ಬೇರೆ ರೀತಿಯಲ್ಲಿ ನಿಗದಿಪಡಿಸಿದ್ದರೆ, ಸರ್ಕಾರಕ್ಕೆ ತಾರತಮ್ಯ ಅನಿಸುವುದಿಲ್ಲವೇ ;

(ಉ) ಇದನ್ನು ಹೋಗಲಾಡಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು? (ಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ನೇಮಕಗೊಂಡವರು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೬೦ (೧೫೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೋಸ್ಟರ್ ನಿಯಮದಂತೆ ಗ್ರಾಮ ಪಂಚಾಯತಿಗಳಲ್ಲಿ ನೇಮಕಾತಿ ಹೊಂದಿ ಜಿಲ್ಲಾ ಪಂಚಾಯಿತಿಗೆ ಅನುಮೋದನೆಗಾಗಿ ಪತ್ರ ಬರೆದು ಅನುಮೋದನೆಗೊಳ್ಳದಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಜಿಲ್ಲಾ ಪಂಚಾಯತಿಗಳಲ್ಲಿ ಅನುಮೋದನೆಗೆ ಬಾಕಿ ಉಳಿಸಿಕೊಳ್ಳಲು ಕಾರಣವೇನು ;

(ಇ) ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು (ಪೂರ್ಣವಿವರ ನೀಡುವುದು) ?

## ಪ್ರೊ. ವೈದ್ಯನಾಥನ್ ವರದಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೧೨೬೧ (೧೫೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೈಹಿಕ ಶಿಕ್ಷಣ ಸುಧಾರಣೆ ಸಂಬಂಧ ಪ್ರೊ: ವೈದ್ಯನಾಥನ್ ವರದಿಯನ್ನು ಜಾರಿಗೆ ತರಲು ಸರ್ಕಾರ ಒಪ್ಪಿಗೆ ನೀಡಿದೆಯೇ ;

(ಆ) ನೀಡಿದ್ದಲ್ಲಿ, ಪ್ರೊ: ವೈದ್ಯನಾಥನ್ ವರದಿಯ ಮುಖ್ಯ ಅಂಶಗಳೇನು ;

(ಇ) ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ವಿಳಂಬ ಉಂಟಾಗುತ್ತಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗುವುದು ?

## ಮಹಿಳಾ ಪ್ರಥಮ ದರ್ಜೆ ಕಾಲೇಜುಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೧೨೬೨ (೧೫೫೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಓದಿಗೆ ಅನುಕೂಲವಾಗುವಂತೆ ಸ್ಥಾಪಿಸಲಾಗಿರುವ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇನ್ನೂ ಯಾವ ಯಾವ ಸ್ಥಳಗಳಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೇ ? (ಮಾಹಿತಿ ನೀಡುವುದು)

## ಖಾಸಗಿ ಶಿಕ್ಷಣ ಸಂಸ್ಥೆಗಳ ಶಾಲಾ ಸಮಯ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :–**

೧೨೬೩ (೧೫೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಖಾಸಗಿ ಶಿಕ್ಷಣ ಸಂಸ್ಥೆಗಳು ತಮಗೆ ಬೇಕಾದ ರೀತಿ ಶಾಲಾ ಸಮಯ ನಿಗದಿಪಡಿಸಿಕೊಂಡು ಸರ್ಕಾರಿ ನಿಯಮ ಉಲ್ಲಂಘನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರಿ ನಿಯಮ ಉಲ್ಲಂಘನೆ ಮಾಡಿರುವ ಯಾವ-ಯಾವ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಕ್ರಮವನ್ನು ಕೈಗೊಳ್ಳಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಯೋಜನೆ-ಯೋಜನೇತರ ಹುದ್ದೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೧೨೬೪ (೧೫೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ಇರುವ ಯೋಜನೆ ಯೋಜನೇತರ ಹುದ್ದೆಗಳೆಷ್ಟು ; (ಸರ್ಕಾರಿ ಹಾಗೂ ಅನುದಾನಿತ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ನೀಡುವುದು)

(ಆ) ಯೋಜನೆಯ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಸಂಬಳ ವಿತರಣೆಯಲ್ಲಿ ನಿರಂತರವಾಗಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಿಳಂಬಕ್ಕೆ ಕಾರಣಗಳೇನು; ಹಾಗೂ ಯೋಜನೆ (Plan) ಹುದ್ದೆಗಳಿಂದ ಯೋಜನೇತರ (Non-Plan) ಹುದ್ದೆಗಳನ್ನಾಗಿ ಪರಿವರ್ತನೆ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

## ಸರ್ಕಾರಿ ಶಾಲಾ ಕಟ್ಟಡಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-**

೧೨೬೫ (೧೫೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಶಾಲಾ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುತ್ತವೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇಂತಹ ಕಟ್ಟಡಗಳನ್ನು ಕೆಡವಿ ನೂತನ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಶಿಕ್ಷಕರ ಅರ್ಹತಾ ಪರೀಕ್ಷೆಗೆ ವಿರೋಧ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೨೬೬ (೧೫೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಕರ ಅರ್ಹತಾ ಪರೀಕ್ಷೆ ಎಂದಿನಿಂದ ಜಾರಿಗೆ ಬಂದಿದೆ ;

(ಆ) ಇದರ ಮಾನದಂಡವೇನು ;

(ಇ) ಪ್ರಾರಂಭದಿಂದ ಕೆಲವು ಖಾಸಗಿ ಶಾಲೆಗಳು ಹಾಗೂ ಸಂಸ್ಥೆಗಳು ಇದಕ್ಕೆ ವಿರೋಧ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಗುಣಮಟ್ಟ ಹೆಚ್ಚಿಸಲು ತಂದಿರುವ ಈ ಪರೀಕ್ಷೆಗೆ ಶಿಕ್ಷಕರ ಸಂಘಗಳೂ ಕೂಡ ವಿರೋಧ ಮಾಡುತ್ತಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಸರ್ಕಾರದ ನಿಲುವೇನು ?

## ತಾಲ್ಲೂಕು ಪಂಚಾಯಿತಿ ಸಭೆ ನಡವಳಿಕೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೨೬೭ (೧೫೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಲ್ಲೂಕು ಪಂಚಾಯಿತಿ ಸಾಮಾನ್ಯ ಸಭೆ, ವಿಶೇಷ ಸಭೆ, ಟಾಸ್ಕ್‌ಫೋರ್ಸ್ ಇತ್ಯಾದಿ ಸಭೆಗಳ ಮಾನದಂಡಗಳೇನು ; ಸಭೆಗೆ ಆಹ್ವಾನಿತರು ಯಾರ್ಯಾರು ?

(ಆ) ಕಳೆದ ಎರಡು ವರ್ಷಗಳಲ್ಲಿ ತುರುವೇಕೆರೆ ತಾಲ್ಲೂಕು ಪಂಚಾಯಿತಿಯಲ್ಲಿ ಎಷ್ಟು ಸಭೆಗಳಾಗಿವೆ ;

(ಇ) ನಡೆದಿರುವಂತಹ ಸಭೆಗಳಿಗೆ ಯಾರ್ಯಾರನ್ನು ಆಹ್ವಾನ ಮಾಡಲಾಗಿದೆ; ಯಾರ್ಯಾರನ್ನು ಕೈಬಿಟ್ಟು ಸಭೆ ಮಾಡಲಾಗಿದೆ ; (ದಿನಾಂಕ, ಹೆಸರು ಸಮೇತ ಮಾಹಿತಿ ನೀಡುವುದು)

(ಈ) ಆಹ್ವಾನಿತರನ್ನು ಕೈ ಬಿಟ್ಟು ಸಭೆಗಳನ್ನು ನಡೆಸಿರುವ ಉದ್ದೇಶಗಳೇನು ;

(ಉ) ದುರುದ್ದೇಶದಿಂದ ಕಾನೂನು ಉಲ್ಲಂಘಿಸಿ ಸಭೆಗಳನ್ನು ನಡೆಸಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ತಿಮ್ಮಪ್ಪಗೌಡನ ಪಾಳ್ಯದ ಗುಡಿಸಲು ನಿವಾಸಿಗಳಿಗೆ ವಸತಿ ಸೌಲಭ್ಯ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೨೬೮ (೧೫೪೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕ್, ಸಿ.ಎಸ್.ಪುರ ಹೋಬಳಿ, ಹಿಂಡಸಗೆರೆ ಗ್ರಾಮ ಪಂಚಾಯ್ತಿ ಮಜರೆ ತಿಮ್ಮಪ್ಪಗೌಡನಪಾಳ್ಯ (ಕುರುಬರಪಾಳ್ಯ) ಗ್ರಾಮದಲ್ಲಿ ವಾಸಿಸುತ್ತಿರುವ ಗುಡಿಸಲು ನಿವಾಸಿಗಳು ಎಷ್ಟು ;

(ಆ) ಹಲವಾರು ವರ್ಷಗಳಿಂದ ಆಶ್ರಯ ಮನೆ ನೀಡಲು ಅರ್ಜಿ ಸಲ್ಲಿಸಿದ್ದರೂ ಈ ಬಡ ಗುಡಿಸಲು ನಿವಾಸಿಗಳಿಗೆ ಮನೆ ನೀಡದಿರಲು ಕಾರಣವೇನು ;

(ಇ) ಈ ಗುಡಿಸಲು ನಿವಾಸಿಗಳನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡಲಾಗಿದೆಯೇ; ಯಾವಾಗ ಆಯ್ಕೆ ಮಾಡಲಾಗಿದೆ; (ಹೆಸರು ಸಮೇತ ಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಈ ವರ್ಷದ ಆಯ್ಕೆ ಪಟ್ಟಿಯಲ್ಲಿ ಈ ಗ್ರಾಮದ ಎಲ್ಲಾ ಬಡ ಗುಡಿಸಲು ನಿವಾಸಿಗಳಿಗೆ ಆಶ್ರಯ ಮನೆ ನೀಡಲಾಗುವುದೇ ?

## ಮುನಿಯೂರಿನ ಓವರ್ ಹೆಡ್‌ಟ್ಯಾಂಕ್‌ನಿಂದ ಅಪಾಯ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೨೬೯ (೧೫೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕು ಮುನಿಯೂರು ಗ್ರಾಮ ಪಂಚಾಯಿತಿ ವ್ಯಾಪ್ತಿ ಮುನಿಯೂರು ಗ್ರಾಮದಲ್ಲಿ ಯಾವಾಗ ಓವರ್ ಹೆಡ್ ಟ್ಯಾಂಕ್ (over head tank) ನಿರ್ಮಾಣ ಮಾಡಲಾಯಿತು ;

(ಆ) ಕಳಪೆ ಕಾಮಗಾರಿಯಿಂದ ಈ ಟ್ಯಾಂಕ್ ಬೀಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಟ್ಯಾಂಕ್‌ನ ಸಮೀಪದಲ್ಲಿ ವಾಸಿಸುತ್ತಿರುವ ನಾಗರೀಕರಿಗೆ ಭಯದ ವಾತಾವರಣ ಇರುವುದು ನಿಜವೇ; ಈಗಾಗಲೇ ಅನೇಕರು ದೂರು ನೀಡಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಕೂಡಲೇ ಇದನ್ನು ನೆಲಸಮ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಕ್ರಮವನ್ನು ಸರ್ಕಾರ ಕೈಗೊಳ್ಳುವುದೇ ;

(ಉ) ಯಾವಾಗ ಈ ಕಾರ್ಯವನ್ನು ನಿರ್ವಹಿಸಲಾಗುವುದು ?

## ಅಂಗನವಾಡಿ ಕೇಂದ್ರಗಳಿಗೆ ಆಹಾರ ಸರಬರಾಜು

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೭೦ (೧೫೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ಇಲ್ಲಿಯವರೆಗೆ ಕಾರವಾರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾದ ಆಹಾರ ಸಮಗ್ರಿಗಳು ಹಾಗೂ ಇತರೇ ಸಾಮಗ್ರಿಗಳಿಗಾಗಿ ಖರ್ಚು ಮಾಡಲಾದ ಮೊತ್ತವೆಷ್ಟು ; (ಪೂರ್ಣ ವಿವರ ತಾಲ್ಲೂಕುವಾರು ನೀಡುವುದು)

(ಆ) ಮೇಲ್ಕಂಡ ಆಹಾರ ಧಾನ್ಯಗಳನ್ನು ಹಾಗೂ ಇಲಾಖೆ ಸಾಮಗ್ರಿಗಳನ್ನು ಸರಬರಾಜು ಮಾಡಿರುವ ಸಂಸ್ಥೆ/ವ್ಯಕ್ತಿಯಾರು (ವ್ಯಕ್ತಿ/ಸಂಸ್ಥೆಯ ವಿವರ ನೀಡುವುದು) ?

## ವಸತಿ ಹೀನರಿಗೆ ವಸತಿ ಸೌಲಭ್ಯ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೭೧ (೧೫೪೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ವಸತಿ ಹೀನರಿಗೆ ವಸತಿ ನೀಡಲು ಸರಕಾರ ಕೈಗೊಂಡಿರುವ ಕ್ರಮವೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಇಂದಿರಾ ಆವಾಸ್/ಆಶ್ರಯ/ಅಂಬೇಡ್ಕರ/ಬಸವಶ್ರೀ ವಸತಿ ಯೋಜನೆಯಡಿಯಲ್ಲಿ ಕಾರವಾರ ಜಿಲ್ಲೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಗೋಧಿ/ಅಕ್ಕಿ ಸರಬರಾಜು

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೨ (೧೫೪೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲಾ, ಹಳಿಯಾಳ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸರಬರಾಜು ಮಾಡಿದ ಅಕ್ಕಿ, ಗೋಧಿಯಲ್ಲಿ ಹುಳಗಳ ರಾಶಿಯಿದ್ದು, ಊಟ ಮಾಡುವ ಮಕ್ಕಳು ಮತ್ತು ಫಲಾನುಭವಿಗಳ ಆರೋಗ್ಯ ಕೆಡುತ್ತಿರುವುದು ಸರಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಈ ರೀತಿ ಕಳಪೆ ಆಹಾರ ಪೂರೈಕೆ ಮಾಡಿರುವ ತಾಲ್ಲೂಕಿನ ಎಮ್.ಎಸ್.ಪಿ.ಟಿ.ಸಿ. ಸಂಸ್ಥೆ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಇದರಲ್ಲಿ ಸಂಬಂಧಿಸಿದ ತಾಲ್ಲೂಕಾ ಸಿ.ಡಿ.ಪಿ.ಓ ರವರು ಶಾಮೀಲಾಗಿರುತ್ತಾರೆಂದು ತಿಳಿದು ಬಂದಿದ್ದು, ಸಂಬಂಧಿಸಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸದರಿ ಸಂಸ್ಥೆಯು ಮೊದಲಿನಿಂದಲೂ ಕಳಪೆ ಮಟ್ಟದ ಆಹಾರ ಪೂರೈಕೆ ಮಾಡುತ್ತಿದ್ದು, ಈಗಲಾದರೂ ಸಂಸ್ಥೆಗೆ ಆಹಾರ ಪೂರೈಕೆ ಈಗಾಗಲೇ ಮಾಡಿರುವ/ಸದ್ಯ ಮಾಡುತ್ತಿರುವ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಿ ಆ ಸಂಸ್ಥೆಯ ಸದಸ್ಯರನ್ನು ಬದಲಾವಣೆ ಮಾಡಲು ಸರಕಾರ ಕ್ರಮ ಕೈಗೊಳ್ಳುವುದೇ (ವಿವರ ನೀಡುವುದು)?

## ಸ್ತ್ರೀಶಕ್ತಿ ಸಂಘಗಳಿಗೆ ಸಂಚಾರಿ ವಾಹನ ವ್ಯವಸ್ಥೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೩ (೧೬೨೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೨-೧೩ನೇ ಸಾಲಿನಲ್ಲಿ ಸ್ತ್ರೀಶಕ್ತಿ ಗುಂಪುಗಳಿಗೆ ಮಾರಾಟ ಮಾಡುವ ವಸ್ತುಗಳಿಗೆ ಸರ್ಕಾರ ಸಂಚಾರಿ ವಾಹನದ ವ್ಯವಸ್ಥೆಯನ್ನು ಮಾಡಲಾಗಿದೆಯೇ ;

(ಆ) ಮಾಡಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ವಾಹನದ ವ್ಯವಸ್ಥೆಯನ್ನು ಮಾಡಲಾಗಿದೆ ತಿಳಿಸುವುದು ;

(ಇ) ವಾಹನ ಖರೀದಿಗೆ ಸರ್ಕಾರ ಎಷ್ಟು ಹಣವನ್ನು ಖರ್ಚುಮಾಡಿದೆ; ಯಾವತರಹದ ವಾಹನ ಖರೀದಿಸಿದೆ; (ವಿವರಣೆ ನೀಡುವುದು)

(ಈ) ಈ ವಾಹನದ ವ್ಯವಸ್ಥೆಯಿಂದ ಸರ್ಕಾರದ ಬೊಕ್ಕಸಕ್ಕೆ ವರ್ಷಕ್ಕೆ ಎಷ್ಟು ಹಣ ನಷ್ಟವಾಗುತ್ತಿದೆ (ಇದರಿಂದ ಸ್ತ್ರೀಶಕ್ತಿ ಸಂಘಗಳಿಗೆ ಆಗುವ ಲಾಭಗಳ ಬಗ್ಗೆ ವಿವರಣೆ ನೀಡುವುದು) ?

## ಕರ್ನಾಟಕ ಗೃಹ ನಿರ್ಮಾಣ ಮಂಡಳಿಯ ನಿವೇಶನ/ಗೃಹ/ವಸತಿ ಸಂಕೀರ್ಣಗಳು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೭೪ (೧೫೪೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗೃಹ ನಿರ್ಮಾಣ ಮಂಡಳಿಯಿಂದ ಮನೆ/ನಿವೇಶನಗಳನ್ನು ನಿರ್ಮಿಸಲು ಉತ್ತರ ಕನ್ನಡ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕಿನ ಹಳ್ಳಿಗಳಲ್ಲಿ ಭೂ ಸ್ವಾಧೀನ ಕಾರ್ಯ ಕೈಗೊಳ್ಳಲಾಗಿದೆ ; ಯಾವ ಯಾವ ಹಳ್ಳಿಗಳಲ್ಲಿ ಎಷ್ಟೆಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕ್ರಮ ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು) ;

(ಆ) ಈ ಪ್ರದೇಶದಲ್ಲಿ ಎಷ್ಟು ಮನೆಯನ್ನು, ನಿವೇಶನಗಳನ್ನು, ವಸತಿ ಸಂಕೀರ್ಣಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ; ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಿ ಕಾರ್ಯಗತಗೊಳಿಸಲಾಗುವುದು (ವಿವರ ನೀಡುವುದು) ?

## ಅಂಗನವಾಡಿ ಕಟ್ಟಡಗಳ ನಿರ್ಮಾಣ.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೭೫ (೧೬೨೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೨–೧೩ನೇ ಸಾಲಿನಿಂದ ಇಲ್ಲಿಯವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕಟ್ಟಡ ಕಟ್ಟಲಾಗಿದೆ (ತಾಲ್ಲೂಕವಾರು ಮಾಹಿತಿ ನೀಡುವುದು) ;

(ಆ) ಪ್ರತಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ನಿಗದಿಪಡಿಸಿದ ಮೊತ್ತವೆಷ್ಟು (ಕಟ್ಟಡವಾರು ವಿವರ ನೀಡುವುದು) ;

(ಇ) ಸದ್ಯ ಎಲ್ಲೆಲ್ಲಿ ಕಾಮಗಾರಿಗಳನ್ನು ಪ್ರಾರಂಭಮಾಡಲಾಗಿದೆ ;

(ಈ) ಪ್ರಾರಂಭವಾದ ಕಾಮಗಾರಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಎಷ್ಟು ; ಅಪೂರ್ಣಗೊಂಡ ಕಾಮಗಾರಿಗಳೆಷ್ಟು ; ಅಪೂರ್ಣಗೊಳ್ಳಲು ಕಾರಣಗಳೇನು ?

## ವಕ್ಫ್ ಆಸ್ತಿ ರಕ್ಷಣೆ ಕಾರ್ಯಪಡೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೨೭೬ (೧೬೨೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ವಕ್ಫ್ ಆಸ್ತಿ ರಕ್ಷಣೆ ಕಾರ್ಯಪಡೆಯನ್ನು ಸ್ಥಾಪಿಸಲಾಗಿದೆಯೇ ;

(ಆ) ಸ್ಥಾಪಿಸಿದ್ದಲ್ಲಿ, ಇದಕ್ಕೆ ಯಾರು ಯಾರು ಸದಸ್ಯರಿರುತ್ತಾರೆ ಎಂಬುದನ್ನು ತಿಳಿಸುವುದು ;

(ಇ) ಕಾರ್ಯಪಡೆ ರಚಿಸಿದ್ದಲ್ಲಿ ಇಲ್ಲಿಯವರೆಗೆ ಎಷ್ಟು ವಕ್ಫ್ ಆಸ್ತಿಗಳನ್ನು ರಕ್ಷಣೆ ಮಾಡಲಾಗಿದೆ (ಆಸ್ತಿವಾರು ಮಾಹಿತಿ ನೀಡುವುದು) ;

(ಈ) ಒಂದು ವೇಳೆ ಕಾರ್ಯಪಡೆಯನ್ನು ರಚಿಸದಿದ್ದಲ್ಲಿ ಕಾರಣಗಳೇನು (ತಿಳಿಸುವುದು) ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿತರಿಸಲಾದ ಅನುದಾನ ಕುರಿತು.

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೭೭ (೧೬೩೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ೨೦೧೩–೧೪ ಮತ್ತು ೨೦೧೪–೧೫ರ ಸಾಲಿನಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅನುದಾನ ಹಾಗೂ ಸಹಾಯಧನವನ್ನು ನಿಗದಿಪಡಿಸಲಾಗಿತ್ತು (ಸಂಘ ಸಂಸ್ಥೆಗಳ ಹೆಸರು ಸಮೇತ ವಿವರ ನೀಡುವುದು) ;

(ಆ) ಅನುದಾನ ಹಾಗೂ ಸಹಾಯ ಧನವನ್ನು ನೀಡಲು ಇಲಾಖೆ ವಿಧಿಸುವ ಮಾನದಂಡವೇನು ; ಒಂದು ಸಂಘ ವರ್ಷದಲ್ಲಿ ಎಷ್ಟು ಬಾರಿ ಅನುದಾನ ಪಡೆಯಲು ಅರ್ಹವಾಗಿರುತ್ತದೆ ಹಾಗೂ ರಾಜ್ಯದ ಎಷ್ಟು ಸಂಘ ಸಂಸ್ಥೆಗಳಿಗೆ ಅನುದಾನ ನೀಡಲಾಗಿದೆ ಮತ್ತು ಸ್ವತ: ಇಲಾಖೆಯು ವರ್ಷಕ್ಕೆ ಎಷ್ಟು ಸಾಂಸ್ಕೃತಿಕ ಕಾರ್ಯಕ್ರಮ ಮಾಡಿರುತ್ತದೆ ; ಅದಕ್ಕೆ ಆಗಿರುವ ಜಿಲ್ಲಾವಾರು ವೆಚ್ಚ ವಿವರವನ್ನು ನೀಡುವುದು (ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಕಾರ್ಯಕ್ರಮಗಳ ವಿವರ ನೀಡುವುದು) ;

(ಇ) ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆ ಅಡಿಯಲ್ಲಿ ಸರ್ಕಾರದಿಂದ ಬಿಡುಗಡೆ ಮಾಡಲಾದ ಮೊತ್ತವೆಷ್ಟು ; ಯಾವ್ಯಾವ ಸಂಘ–ಸಂಸ್ಥೆಗಳಿಗೆ ಈ ಯೋಜನೆಗಳಡಿ ಅನುದಾನ ಮತ್ತು ಸಹಾಯಧನ ಮಂಜೂರು ಮಾಡಲಾಗಿದೆ ?

## ವಿದ್ಯಾರ್ಥಿಗಳಿಗೆ ನೀಡಲಾದ ಕಂಪ್ಯೂಟರ್‌ಗಳು.

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೭೮ (೧೬೩೩) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ರಾಜ್ಯ ಸರ್ಕಾರದಿಂದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ೨೦೧೩–೧೪ ಮತ್ತು ೨೦೧೪–೧೫ ನೇ ಸಾಲಿಗೆ ವಿತರಿಸಲಾದ ಕಂಪ್ಯೂಟರ್‌ಗಳ ಕುರಿತ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಬಂದಿದ್ದಲ್ಲಿ ವಿವರ ನೀಡುವುದು) ;

(ಆ) ವಿದ್ಯಾರ್ಥಿಗಳಿಗೆ ನೀಡಬೇಕಾದ ಕಂಪ್ಯೂಟರ್‌ಗಳು ಕಡಿಮೆ ಗುಣಮಟ್ಟದ್ದಾಗಿದ್ದು, ಇನ್ನೂ ಕೂಡ ವಿತರಣೆಯಾಗಿಲ್ಲವೆಂಬ ದೂರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ ಕಾರಣವೇನು ; ವಿದ್ಯಾರ್ಥಿಗಳಿಗೆ ವಿತರಣೆಯಾದಲ್ಲಿ ಜಿಲ್ಲಾವಾರು ವಿವರ ನೀಡುವುದು ;

(ಇ) ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳು ಎಷ್ಟು ಹಾಗೂ ಯಾವ–ಯಾವ ಸಂಸ್ಥೆಗಳು ಭಾಗವಹಿಸಿದ್ದವು ; ಟೆಂಡರ್‌ನಲ್ಲಿ ಭಾಗವಹಿಸಲು ಯಾವ ಮಾನದಂಡಗಳನ್ನು ವಿಧಿಸಲಾಗಿತ್ತು ;

(ಈ) ರಾಜ್ಯದಲ್ಲಿ ಒಟ್ಟು ವಿತರಣೆಯಾದ ಕಂಪ್ಯೂಟರ್‌ಗಳ ಸಂಖ್ಯೆ ಹಾಗೂ ಗುಣಮಟ್ಟದ ಬಗ್ಗೆ ಸರ್ಕಾರದ ನಿಲುವೇನು ; ಈಗಾಗಲೇ ಹಲವು ಶಾಲೆಗಳಲ್ಲಿ ಸರ್ಕಾರದಿಂದ ವಿತರಣೆಯಾದ ಕಂಪ್ಯೂಟರ್‌ಗಳು ಹಾಳಾಗಿವೆ ಎಂಬುದರಲ್ಲಿ ಹುರುಳಿದೆಯೇ ; ಹಾಳಾದ ಕಂಪ್ಯೂಟರ್‌ಗಳ ಸಂಖ್ಯೆ ಎಷ್ಟು ಹಾಗೂ ಅವುಗಳ ಬದಲಿಗೆ ಬೇರೆ ಕಂಪ್ಯೂಟರ್‌ಗಳ ವ್ಯವಸ್ಥೆ ಮಾಡಲಾಗಿದೆಯೇ ?

## ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳು.

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೭೯ (೧೬೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಅಂಗನವಾಡಿಗಳು ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿವೆ ; ಎಷ್ಟು ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸುವ ಕಾಮಗಾರಿಗಳು ನಡೆಯುತ್ತಿವೆ ತಾಲ್ಲೂಕುವಾರು ವಿವರ ಒದಗಿಸುವುದು) ;

(ಆ) ಈ ಅಂಗನವಾಡಿ, ಮಿನಿ ಅಂಗನವಾಡಿಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯಗಳ ಕೊರತೆ ಇರುವುದು ಕಂಡು ಬಂದಿದೆಯೇ ; ಎಷ್ಟು ಅಂಗನವಾಡಿ ಕಟ್ಟಡಗಳಿಗೆ ಕುಡಿಯುವ ನೀರಿನ ಸೌಲಭ್ಯ ಮತ್ತು ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಬೇಕಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು) ;

(ಇ) ಸದರಿ ಜಿಲ್ಲೆಗಳಲ್ಲಿ ಅಂಗನವಾಡಿ ಕಾರ್ಯಕರ್ತರ ಎಷ್ಟು ಹುದ್ದೆಗಳು ಖಾಲಿ ಇವೆ ; ಇವರ ನೇಮಕಾತಿಗಾಗಿ ಕೈಗೊಂಡಿರುವ ಕ್ರಮ ಏನು ;

(ಈ) ಗಿರಿಜನರು ವಾಸಿಸುವ ಪೋಡಿಗಳಲ್ಲಿ ಅಂಗನವಾಡಿ ಸೌಲಭ್ಯ ಕಲ್ಪಿಸಲಾಗಿದೆಯೇ (ವಿವರ ಒದಗಿಸುವುದು) ?

## ಮಹಾಲಿಂಗನ ಕಟ್ಟೆ-ಲೊಕ್ಕನಹಳ್ಳಿ ರಸ್ತೆ.

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೦ (೧೬೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳ್ಳೇಗಾಲ ತಾಲ್ಲೂಕು, ಮಹಾಲಿಂಗನ ಕಟ್ಟೆಯಿಂದ ಲೊಕ್ಕನಹಳ್ಳಿವರೆಗೆ ರಸ್ತೆ ಪೂರ್ತಿ ಹದಗೆಟ್ಟಿದ್ದು, ಚಿಕ್ಕ ಸೇತುವೆ ಕುಸಿದು ಬಿದ್ದಿದ್ದು, ವಾಹನ ಸಂಚಾರಕ್ಕೆ ಅಡಚಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರಸ್ತೆ ರಿಪೇರಿಗೆ ಖರ್ಚು ಮಾಡಿರುವ ಹಣವೆಷ್ಟು ; ಈ ರಸ್ತೆಯನ್ನು ಸರಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಸಂತೇಮರಹಳ್ಳಿ, ಹೆಗ್ಗವಾಡಿಪುರ ರಸ್ತೆ ಕಾಮಗಾರಿ ಅಪೂರ್ಣವಾಗಿದ್ದು ಕಾಮಗಾರಿ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರಸ್ತೆ ಅಭಿವೃದ್ಧಿಗೆ ಒದಗಿಸಿರುವ ಹಣ ಮತ್ತು ಖರ್ಚಾಗಿರುವ ಹಣ ಎಷ್ಟು ; ಈ ರಸ್ತೆಯನ್ನು ಕೂಡಲೇ ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಬಸವ ವಸತಿ ಯೋಜನೆ.**

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೧ (೧೬೨೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಸವ ವಸತಿ ಯೋಜನೆಯನ್ವಯ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಇದುವರೆಗೆ ನಿರ್ಮಿಸಿರುವ ಮನೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ಒದಗಿಸುವುದು) ;

(ಆ) ಸದರಿ ಜಿಲ್ಲೆಗಳಿಗೆ ಬಸವ ವಸತಿ ಯೋಜನೆಯನ್ವಯ ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು ; ಇದಕ್ಕಾಗಿ ಒದಗಿಸಿರುವ ಆಯವ್ಯಯ ಎಷ್ಟು ; ನಿರ್ಮಾಣ ಕಾಮಗಾರಿಗಳನ್ನು ಆರಂಭಿಸಲಾಗಿದೆಯೇ ;

(ಇ) ಗಿರಿಜನ ಪೋಡಿಗಳಿಗೆ ಆದ್ಯತೆಯ ಮೇರೆಗೆ ಬಸವ ವಸತಿ ಯೋಜನೆಯನ್ವಯ ಮನೆಗಳನ್ನು ಮಂಜೂರು ಮಾಡಿ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ (ವಿವರ ಒದಗಿಸುವುದು) ?

**ಶಿಕ್ಷಣ ನೀತಿ ಜಾರಿಗೆ.**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೨(೧೬೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೧ ರಿಂದ ೫ ರವರೆಗೆ "ಪ್ರಾಥಮಿಕ ಶಾಲೆ" ೬ರಿಂದ ೮ ರವರೆಗೆ "ಮಾಧ್ಯಮಿಕ ಶಾಲೆ" ೯ ರಿಂದ ೧೨ ರವರೆಗೆ "ಪ್ರೌಢಶಾಲೆ" ಶಿಕ್ಷಣ ನೀತಿಯನ್ನು ಯಾವಾಗ ಜಾರಿಗೆ

ತರಲಾಗುವುದು ;(ಪೂರ್ಣ ಮಾಹಿತಿ ನೀಡುವುದು) ಒಂದು ವೇಳೆ ತರದೆ ಇದ್ದ ಪಕ್ಷದಲ್ಲಿ ಸರ್ಕಾರದ ಕಾರ್ಯಕ್ರಮವನ್ನು ತರಲು ಸರ್ಕಾರಕ್ಕಿರುವ ಅಡತಡೆಗಳೇನು (ಪೂರ್ಣ ಮಾಹಿತಿ ನೀಡುವುದು)

(ಆ) ಒಂದು ವೇಳೆ ಮೇಲ್ಕಂಡ ಶಿಕ್ಷಣ ನೀತಿಯನ್ನು ಜಾರಿ ಮಾಡಿದರೆ ಈ ಕಾರ್ಯಕ್ರಮದ ಪೂರ್ಣ ವರದಿಯೊಂದಿಗೆ ಸರ್ಕಾರದ ಆದೇಶದೊಂದಿಗೆ ಮಾಹಿತಿ ನೀಡುವುದು ?

## ಬಯೋಮೆಟ್ರಿಕ್ ವ್ಯವಸ್ಥೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೩(೧೬೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮೀಣ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಯಿತು ; ಇದರ ಉದ್ದೇಶಗಳೇನು ; ಇದರಿಂದ ಆಡಳಿತಾತ್ಮಕವಾಗಿ ಆಗಿರುವ ಬದಲಾವಣೆಗಳೇನು (ವಿವರಗಳನ್ನು ನೀಡುವುದು) ;

(ಇ) ಬಯೋಮೆಟ್ರಿಕ್ ವ್ಯವಸ್ಥೆ ಜಾರಿಗೆ ಬಂದ ನಂತರ ಲೋಪಗಳಾಗಿರುವ ಪ್ರಕರಣಗಳೆಷ್ಟು ; ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಗಳನ್ನು ನೀಡುವುದು ;

(ಈ) ಈ ಉದ್ದೇಶದಿಂದಾಗಿ ಸ್ಥಳೀಯ ಆಡಳಿತದಲ್ಲಿ ಅನುಕೂಲವಾಗಿದೆಯೇ ; ಇದಕ್ಕಾಗಿ ತಗುಲಿರುವ ವೆಚ್ಚವೆಷ್ಟು (ಪೂರ್ಣ ಮಾಹಿತಿ ನೀಡುವುದು) ?

**ಅಂಗನವಾಡಿ ಕಾರ್ಯಕರ್ತರು ಮತ್ತು ಆಹಾರ ವಿತರಣೆ**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೨೮೪ (೧೬೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಂಗನವಾಡಿ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಂಗನವಾಡಿ ಸಹಾಯಕಿ ಮತ್ತು ಸಿಬ್ಬಂದಿಗಳ ವಿವರಗಳನ್ನು ತಾಲ್ಲೂಕುವಾರು ಮಾಹಿತಿ ನೀಡುವುದು;

(ಆ) ಈ ಅಂಗನವಾಡಿ ಸಹಾಯಕಿ ಮತ್ತು ಸಿಬ್ಬಂದಿಗಳಿಗೆ ಯಾವ ಯಾವ ಕರ್ತವ್ಯ ಹಾಗೂ ಹೊಣೆಗಾರಿಕೆಯನ್ನು ವಹಿಸಲಾಗಿದೆ; ಹೊಣೆಗಾರಿಕೆ ಕರ್ತವ್ಯದ ಪರಿವೀಕ್ಷಣಾ ವರದಿಗಳನ್ನು ಆಯಾ ಜಿಲ್ಲಾಧಿಕಾರಿಗಳು ಪಡೆಯುತ್ತಿರುವರೆ; (ವಿವರಗಳನ್ನು ನೀಡುವುದು)

(ಇ) ಹಾಗಿಲ್ಲದಿದ್ದಲ್ಲಿ, ಈ ಬಗ್ಗೆ ಸರ್ಕಾರ ಬೇರೆ ಬೇರೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ; (ವಿವರಗಳನ್ನು ನೀಡುವುದು)

(ಈ) ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿ ಮಗುವಿಗೆ ನೀಡಲಾಗುತ್ತಿರುವ ಆಹಾರ ಮತ್ತು ಪೌಷ್ಠಿಕಾಂಶ ಆಹಾರದ ವಿತರಣೆಗೆ

ಅನುಸರಿಸಲಾಗುತ್ತಿರುವ ಮಾನದಂಡಗಳ ಬಗ್ಗೆ ಆಯಾ ಕೇಂದ್ರಗಳಲ್ಲಿ ಎಲ್ಲರಿಗೂ ಕಾಣುವ ರೀತಿ ನಾಮಫಲಕದಲ್ಲಿ ಪ್ರಕಟಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಉ) ಅಂಗನವಾಡಿ ಸಹಾಯಕಿ ಹಾಗೂ ಸಿಬ್ಬಂದಿಗಳಿಗೆ ಸರ್ಕಾರ ನಿಗದಿಗೊಳಿಸಿ ನೀಡುತ್ತಿರುವ ಗೌರವಧನವೆಷ್ಟು; ಈ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಊ) ಈ ಅಂಗನವಾಡಿ ಕೇಂದ್ರಗಳ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ವರ್ಷಕ್ಕೆ ಹಾಗೂ ಎಷ್ಟು ಮೊತ್ತಕ್ಕೆ ನೀಡಲಾಗಿದೆ; (ಖಾಸಗಿ ಸಂಸ್ಥೆಗಳವಾರು ಮತ್ತು ಜಿಲ್ಲಾವಾರು ವಿವರಗಳನ್ನು ನೀಡುವುದು)

(ಋ) ಖಾಸಗಿ ಸಂಸ್ಥೆಗಳಿಂದ ಪಡೆಯಲಾಗುವ ಆಹಾರ ಪದಾರ್ಥಗಳ ಗುಣಮಟ್ಟ ಹಾಗೂ ಸುರಕ್ಷತೆಯ ಬಗ್ಗೆ ಅನುಸರಿಸಲಾಗುತ್ತಿರುವ ಮಾನದಂಡಗಳೇನು (ವಿವರಗಳನ್ನು ನೀಡುವುದು) ?

## ಮುತ್ತತ್ತಿ ನದಿಯಲ್ಲಿ ಸುಳಿಗೆ ಸಿಕ್ಕಿ ಸಾವನ್ನಪ್ಪಿದವರು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೧೨೮೫ (೧೬೧೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಳವಳ್ಳಿ ತಾಲ್ಲೂಕು, ಮುತ್ತತ್ತಿ ನದಿಗೆ ಪ್ರವಾಸಿಗರು ಅದರಲ್ಲೂ ಹೆಚ್ಚಿಗೆ ಯುವಕರು ತೆರಳುತ್ತಿದ್ದು, ಯುವಕರು ಈಜಲು ಹೋಗಿ ನದಿಯ ಸುಳಿಗೆ ಸಿಕ್ಕಿ ಸಾವನ್ನಪ್ಪಿದವರ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಕಳೆದ ಮೂರು ವರ್ಷಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ ಎಷ್ಟು)

(ಆ) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಈ ನದಿ ಸುಳಿಗೆ ಸಿಕ್ಕಿ ಸಾವನ್ನಪ್ಪಿದವರಿಗೆ ಸರ್ಕಾರದಿಂದ ಪರಿಹಾರ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು;

(ಈ) ಒಂದು ವೇಳೆ ಪರಿಹಾರ ನೀಡಿದ್ದರೆ ಎಷ್ಟು ಪರಿಹಾರ ನೀಡಲಾಗಿದೆ; ಎಂದಿನಿಂದ ಅನುಷ್ಠಾನಗೊಳಿಸಲಾಗಿದೆ (ವಿವರ ನೀಡುವುದು) ?

## ಅನುದಾನಿತ ಪದವಿ ಮಹಾವಿದ್ಯಾಲಯಗಳ ಸಿಬ್ಬಂದಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ):-**

೧೨೮೬ (೧೬೧೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದರಾಬಾದ್-ಕರ್ನಾಟಕ ಭಾಗದಲ್ಲಿರುವ ಅನುದಾನಿತ ಪದವಿ ಮಹಾವಿದ್ಯಾಲಯಗಳು ಎಷ್ಟು; ಯಾವ ವರ್ಷದಿಂದ ಪ್ರಾರಂಭವಾಗಿವೆ; ಮತ್ತು ಯಾವ ವರ್ಷದಲ್ಲಿ ಸರಕಾರದಿಂದ ಅನುದಾನ ಪಡೆದುಕೊಂಡಿವೆ; (ಪ್ರತ್ಯೇಕ ವಿವರ ನೀಡುವುದು)

(ಆ) ಹೈದರಾಬಾದ್-ಕರ್ನಾಟಕ ಭಾಗದಲ್ಲಿರುವ ಅನುದಾನಿತ ಪದವಿ ಮಹಾವಿದ್ಯಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಎಷ್ಟು; (ಹುದ್ದೆವಾರು ಮಾಹಿತಿ ನೀಡುವುದು)

(ಇ) ಹೊಸದಾಗಿ ಪದವಿ ಮಹಾವಿದ್ಯಾಲಯಗಳು ಸರಕಾರದಿಂದ ಅನುದಾನ ಪಡೆದುಕೊಳ್ಳಬೇಕಾದರೆ ಇರುವ ಮಾನದಂಡಗಳೇನು; (ಸಮಗ್ರ ವಿವರ ನೀಡುವುದು)

(ಈ) ಹೈದರಾಬಾದ್-ಕರ್ನಾಟಕ ಭಾಗದ ಎಷ್ಟು ಪದವಿ ಮಹಾವಿದ್ಯಾಲಯಗಳು ಅನುದಾನಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳು ಸಲ್ಲಿಸಿವೆ; ಸದ್ಯ ಅವುಗಳು ಯಾವ ಹಂತದಲ್ಲಿವೆ (ಸಮಗ್ರ ವಿವರ ನೀಡುವುದು) ?

**ನರ್ಮ್ ಯೋಜನೆಯಡಿ ಯೋಜನಾ ಅನುಷ್ಠಾನ ಘಟಕಗಳು.**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ):-**

೧೨೮೭ (೧೬೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನರ್ಮ್ ಯೋಜನೆಯ ಅವಧಿ ಎಲ್ಲಿಯವರೆಗೆ ಚಾಲ್ತಿಯಿರುತ್ತದೆ; ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯಲ್ಲಿ ಸ್ಥಾಪಿಸಿರುವ ಯೋಜನಾ ಅನುಷ್ಠಾನ ಘಟಕಗಳು (PIU) ಎಷ್ಟು; ಎಷ್ಟು ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲಾಗಿದೆ; (ಹುದ್ದೆವಾರು ವಿವರ ನೀಡುವುದು)

(ಆ) ಯೋಜನಾ ಅನುಷ್ಠಾನ ಘಟಕ ಸಿಬ್ಬಂದಿಯ ಅವಧಿ ಎಷ್ಟು ವರ್ಷ ಇವರ ವೇತನ ಯಾವ ಲೆಕ್ಕಶೀರ್ಷಿಕೆಯಲ್ಲಿ ನೀಡಲಾಗುವುದು; ಇವರ ಕರ್ತವ್ಯ ಏನು;

(ಇ) ಸದರಿ ಸಿಬ್ಬಂದಿಗೆ ಮಂಡಳಿಯಿಂದ ನೀಡಿರುವ ವೇತನದ ಒಟ್ಟು ಮೊತ್ತ ಎಷ್ಟು; ಕೇಂದ್ರ ಸರ್ಕಾರದಿಂದ ಇದಕ್ಕಾಗಿ ಬಿಡುಗಡೆ ಮಾಡಿರುವ ಮೊತ್ತವೆಷ್ಟು;

(ಈ) ಈ ಸಿಬ್ಬಂದಿಯ ಕರಾರು ಒಪ್ಪಂದ ಯಾವಾಗ ಮುಕ್ತಾಯವಾಗಿದೆ; ನರ್ಮ್ ಯೋಜನೆಯಡಿ ಮುಂದುವರೆಸಲು ಅವಕಾಶವಿದೆಯೇ; ಅವಕಾಶವಿದ್ದರೆ. ಸರ್ಕಾರದ ಆದೇಶ ಪ್ರತಿ ನೀಡುವುದು;

(ಉ) ಮಂಡಳಿಯಲ್ಲಿ (PIU) ಯೋಜನೆ ಅನುಷ್ಠಾನ ಘಟಕದ ಸಿಬ್ಬಂದಿಯುವರು ಕರಾರು ಅವಧಿ ಮುಗಿದಿದ್ದರೂ ಕಾನೂನುಬಾಹಿರವಾಗಿ ಕಚೇರಿ ಕೆಲಸ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ನೂತನ ಪಿಂಚಣಿ ಯೋಜನೆ (NPS) ಅನುಷ್ಠಾನ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ):-**

೧೨೮೮ (೧೬೧೩) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ, ವಿಶ್ವವಿದ್ಯಾಲಯ ಸೇರಿದಂತೆ ವಿವಿಧ ನಿಗಮ ಮಂಡಳಿಗಳಲ್ಲಿ ಹೊಸದಾಗಿ ನೇಮಕಗೊಂಡ ಸರ್ಕಾರಿ ನೌಕರ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದು ಯಾವಾಗಿನಿಂದ ಜಾರಿಗೆ ಬಂದಿರುತ್ತದೆ; ಸರ್ಕಾರಿ ನೌಕರರಿಗೆ ನಿವೃತ್ತಿ ಪಿಂಚಣಿ ಸೌಲಭ್ಯವನ್ನು ರದ್ದುಪಡಿಸಲು ಕಾರಣಗಳೇನು;

(ಆ) ಇದು ಜಾರಿಗೆ ಬಂದ ನಂತರ ಹೊಸದಾಗಿ ನೇಮಕಗೊಂಡ ನೌಕರರು ಇದರಿಂದ ಬಾಧಿತರಾಗುವುದರಿಂದ ಪರ್ಯಾಯ ಯೋಜನೆ ಹಾಗೂ ಸೌಲಭ್ಯಗಳನ್ನು ಸರ್ಕಾರ ಒದಗಿಸಿದೆಯೇ; ಅಂತಹ ವಿಶೇಷ ಸೌಲಭ್ಯಗಳಾವುವು; ಇದನ್ನು ಸರ್ಕಾರದ ವಿಶ್ವವಿದ್ಯಾಲಯಗಳು ಸೇರಿದಂತೆ ಯಾವ ಯಾವ ಇಲಾಖೆಗಳು ಅನ್ವಯಗೊಳಿಸಿರುತ್ತವೆ; (ವಿಶೇಷವಾಗಿ ಕರ್ನಾಟಕ ರಾಜ್ಯ ಮುಕ್ತ

ವಿಶ್ವವಿದ್ಯಾಲಯದಲ್ಲಿ ಈ ಯೋಜನೆ ಸಫಲಗೊಳ್ಳದಿರುವುದು ನಿಜವೇ ತಿಳಿಸುವುದು)

(ಇ) ೨೦೦೬ ರಿಂದ ಅನ್ವಯ ಮಾಡಿದ ಈ ನೂತನ ಪಿಂಚಣಿ ಯೋಜನೆ (ಎನ್‌ಪಿಎಸ್) ಅನುಷ್ಠಾನದ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇದಕ್ಕಾಗಿ ನೌಕರರ ಹಾಗೂ ಸರ್ಕಾರ (ವಿಶ್ವವಿದ್ಯಾಲಯಗಳು ಸೇರಿ) ತಮ್ಮ ಪಾಲಿನ ವಂತಿಗೆಯೊಂದಿಗೆ ನೌಕರರ ಎನ್‌ಪಿಎಸ್ ಖಾತೆಗೆ ಪಾವತಿಯಾಗದಿರುವುದು ನಿಜವೇ; ಕಾರಣಗಳೇನು; ಹಾಗಿದ್ದಲ್ಲಿ ಯಾವಾಗ ಪಾವತಿ ಮಾಡಲಾಗುವುದು; (ಅಂತಹ ನೌಕರರ ಸಂಖ್ಯೆ ವಿವರ ಒದಗಿಸುವುದು)

ಈ) ಈ ಕ್ರೋಢೀಕೃತ ವಂತಿಗೆಯು ಮೇಲೆ ಪ್ರತಿ ವರ್ಷ ಪಾವತಿಯಾಗಬೇಕಾದ ಬಡ್ಡಿಯೂ ಲಭ್ಯವಾಗದಿರುವುದರಿಂದ ಸಾವಿರಾರು ನೌಕರ ಸಿಬ್ಬಂದಿಗಳಿಗೆ ಅಪಾರ ಆರ್ಥಿಕ ನಷ್ಟವುಂಟಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ;

(ಉ) ಸದರಿ ಯೋಜನೆ ಶೀಘ್ರ ಜಾರಿಗೆ ಪೂರಕವಾಗಿ ಆರ್ಥಿಕ ಇಲಾಖೆ, ಪಿಂಚಣಿ ಇಲಾಖೆ, ಎನ್.ಪಿ.ಎಸ್. ಅನುಷ್ಠಾನ ಘಟಕ ಹಾಗೂ ಸಂಬಂಧಪಟ್ಟ ಇಲಾಖೆಗಳು ಮತ್ತು ವಿ.ವಿ.ಗಳು ಇನ್ನಾದರೂ ವಿಳಂಬ ನೀತಿ ಬಿಟ್ಟು ಈ ನೂತನ ಯೋಜನೆಯನ್ನಾದರೂ ಶೀಘ್ರ ಜಾರಿ ಮಾಡುವ ಅಥವಾ ೨೦೦೬ಕ್ಕೂ ಮೊದಲಿದ್ದ ಪಿಂಚಣಿ ಸೌಲಭ್ಯವನ್ನಾದರೂ ಮುಂದುವರೆಸುವ ಬಗ್ಗೆ ಸರ್ಕಾರ, ವಿ.ವಿ.ಗಳ ನಿಲುವೇನು (ಸ್ಪಷ್ಟನೆಯೊಂದಿಗೆ) ?

## ಶೈಕ್ಷಣಿಕ ವಲಯಗಳು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ):-**

೧೨೮೯ (೧೬೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಶೈಕ್ಷಣಿಕ ವಲಯಗಳನ್ನು ಗುರುತಿಸಲಾಗಿದೆಯೇ ; ಯಾವಾಗಿನಿಂದ ಈ ಪದ್ಧತಿ ಜಾರಿಗೆ ಬಂದಿರುತ್ತದೆ ; ಇದಕ್ಕೆ ಕಾರಣಗಳೇನು ; ಆ ಶೈಕ್ಷಣಿಕ ವಲಯಗಳಾವುವು ;

(ಆ) ಇದೇ ರೀತಿಯಲ್ಲಿ ಶೈಕ್ಷಣಿಕ ವಲಯಗಳಿಗನುಗುಣವಾಗಿ ಶೈಕ್ಷಣಿಕ ಜಿಲ್ಲೆಗಳನ್ನು ಗುರುತಿಸಲಾಗಿದೆಯೇ ; ಯಾವ ಯಾವ ಹೊಸ ಶೈಕ್ಷಣಿಕ ಜಿಲ್ಲೆಗಳನ್ನಾಗಿ ಗುರುತಿಸಲಾಗಿದೆ ; ಅವುಗಳ ಕೇಂದ್ರಸ್ಥಾನವಾರು ಆ ಹೊಸ ಶೈಕ್ಷಣಿಕ ಜಿಲ್ಲೆಗಳಿಗೆ ಬರುವ ತಾಲ್ಲೂಕುಗಳವಾರು ವಿವರಗಳನ್ನು ಒದಗಿಸುವುದು ;

(ಇ) ಈ ಪೈಕಿ ಇನ್ನೂ ಹೆಚ್ಚುವರಿಯಾಗಿ ಹೊಸ ಶೈಕ್ಷಣಿಕ ಜಿಲ್ಲೆಗಳನ್ನು ಗುರುತಿಸಲು ಮತ್ತು ಆ ಜಿಲ್ಲೆಗಳನ್ನು ರಚಿಸಲು ಸರ್ಕಾರ ಮುಂದಾಗಿದೆಯೇ ; ಅಂತಹ ಜಿಲ್ಲೆಗಳ್ಯಾವುವು ; ಗುರುತಿಸಿರುವ ಜಿಲ್ಲಾ ಸ್ಥಳಗಳ್ಯಾವುವು (ವಿವರ ನೀಡುವುದು) ;

(ಈ) ಸದರಿ ಪ್ರಕ್ರಿಯೆಯಂತೆ ಬಳ್ಳಾರಿ ಜಿಲ್ಲೆಯನ್ನು ಎರಡು ಶೈಕ್ಷಣಿಕ ಜಿಲ್ಲೆಗಳಾಗಿ ವಿಭಜಿಸುವ ಇರಾದೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವಾಗ ಇದನ್ನು ಪೂರ್ಣಗೊಳಿಸಲಾಗುತ್ತದೆ ; ಇದಕ್ಕೆ ಅನುಸರಿಸುವ ಮಾನದಂಡಗಳೇನು (ತಿಳಿಸುವುದು) ;

(ಉ) ಬಳ್ಳಾರಿ ಜಿಲ್ಲೆಯು ಶೈಕ್ಷಣಿಕವಾಗಿ ಅತೀ ದೊಡ್ಡ ಜಿಲ್ಲೆಯಾಗಿದ್ದು ಹೆಚ್ಚಿನ ಶಿಕ್ಷಕರ ಹಾಗೂ ಕಾರ್ಯಕ್ಷೇತ್ರದ ವ್ಯಾಪ್ತಿ ದೂರವಿರುವ ಕಾರಣದಿಂದ ಸಮರ್ಪಕ ಆಡಳಿತ, ಉತ್ತಮ ಸೇವೆಗೆ ಅನಾನುಕೂಲವಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೇ ;

(ಊ) ಹಾಗಿದ್ದಲ್ಲಿ, ಬಳ್ಳಾರಿ ಜಿಲ್ಲೆಯನ್ನು ಯಾವಾಗ ವಿಭಜಿಸಿ ಎರಡು ಶೈಕ್ಷಣಿಕ ಜಿಲ್ಲೆಗಳಾಗಿ ಪರಿವರ್ತಿಸಲಾಗುತ್ತದೆ (ವಿವರ ನೀಡುವುದು) ?

## ಹೈದ್ರಾಬಾದ ಕರ್ನಾಟಕ ಪ್ರದೇಶದಲ್ಲಿ ಎಸ್. ಎಸ್. ಎಲ್. ಸಿ, ಪಿ. ಯು. ಸಿ ಫಲಿತಾಂಶಗಳು.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ):-**

೧೨೯೦ (೧೬೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎಸ್. ಎಸ್. ಎಲ್. ಸಿ. ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೈದ್ರಾಬಾದ ಕರ್ನಾಟಕ ಪ್ರದೇಶದ ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಜಿಲ್ಲೆಗಳು ಕೊನೆಯ ಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಈ ಜಿಲ್ಲೆಗಳು ಯಾವ ಸ್ಥಾನದಲ್ಲಿದ್ದವು ; ಶೇಕಡಾ ಎಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗುತ್ತಿದ್ದಾರೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ಫಲಿತಾಂಶದಲ್ಲಿ ಈ ಪ್ರದೇಶ ಹಿಂದೆ ಉಳಿಯಲು ಕಾರಣಗಳನ್ನು ಪತ್ತೆ ಮಾಡಲು ಸರ್ಕಾರ ಯಾವುದಾದರೂ ಕ್ರಮಗಳನ್ನು ಕೈಗೊಂಡಿದೆಯೇ ; ಕೈಗೊಂಡಿದ್ದರೆ, ಸಮಗ್ರ ಮಾಹಿತಿ ಒದಗಿಸುವುದು ;

(ಈ) ಈ ಪ್ರದೇಶದ ಫಲಿತಾಂಶ ಹೆಚ್ಚಿಸಲು ಸರ್ಕಾರದ ಮುಂದಿರುವ ಕ್ರಮಗಳೇನು (ಸಮಗ್ರ ಮಾಹಿತಿ ನೀಡುವುದು) ?

## ಕೊಳಚೆ ನಿವಾಸಿಗಳಿಗೆ ವಸತಿ ಸೌಲಭ್ಯ .

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೯೧ (೧೬೦೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಲಗ್ಗೆರೆಯಲ್ಲಿ ಕೊಳಚೆ ನಿವಾಸಿಗಳಿಗೆ ವಸತಿ ನಿರ್ಮಾಣಕ್ಕೆ ಸರ್ಕಾರ ಎಷ್ಟು ಜಮೀನನ್ನು ಮಂಜೂರು ಮಾಡಿತ್ತು;

(ಆ) ಈ ಜಮೀನನ್ನು ಖಾಸಗಿಯವರು ಒತ್ತುವರಿ ಮಾಡಿರುವುದು ಮತ್ತು ಆ ಒಟ್ಟು ಜಮೀನಿನ ಪೈಕಿ ಖಾಸಗಿಯವರಿಗೆ ಸರ್ಕಾರ ಮಂಜೂರು ಮಾಡಿರುವುದು/ಬಿಟ್ಟುಕೊಟ್ಟಿರುವುದು ನಿಜವೇ (ಸಂಪೂರ್ಣ ವಿವರವನ್ನು ಒದಗಿಸುವುದು) ?

## ಸರ್ಕಾರ ಹಿರಿಯ ನಾಗರೀಕರ ಸಬಲೀಕರಣಕ್ಕೆ ರೂಪಿಸಿರುವ ಕಾರ್ಯಕ್ರಮದ ಬಗ್ಗೆ.

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೨೯೨ (೧೬೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಹಿರಿಯ ನಾಗರೀಕರ ಸಬಲೀಕರಣಕ್ಕೆ ರೂಪಿಸಿರುವ ಕಾರ್ಯಕ್ರಮಗಳೇನು; ಫಲಾನುಭವಿಗಳನ್ನು ಗುರುತಿಸಲು ಅನುಸರಿಸುವ ಮಾನದಂಡವೇನು;

(ಆ) ದಿಕ್ಕಿಲ್ಲದವರಿಗೆ ಆಶ್ರಯ ನೀಡಲು ಸರ್ಕಾರ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಎಷ್ಟು ಕೇಂದ್ರಗಳನ್ನು ನಡೆಸುತ್ತಿದೆ ಮತ್ತು ಅನುದಾನ ಕೇಂದ್ರಗಳು ಎಷ್ಟು; ನೀಡುತ್ತಿರುವ ಸೌಲಭ್ಯವೇನು (ಪೂರ್ಣ ವಿವರ ಒದಗಿಸುವುದು) ?

## ಕೊಳಚೆ ಅಭಿವೃದ್ಧಿ ಮಂಡಳಿಯಿಂದ ವಸತಿ ರಹಿತರಿಗೆ ಮನೆ ಹಂಚಿಕೆ.

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೨೯೩ (೧೬೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಕೊಳಚೆ ಅಭಿವೃದ್ಧಿ ಮಂಡಳಿಯಿಂದ ನಗರ ಪ್ರದೇಶದ ಬಡವರಿಗೆ ನೆಹರು ನಗರ ಯೋಜನೆಯಲ್ಲಿ ಮನೆಗಳನ್ನು ಹಂಚಿಕೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಮನೆ ಹಂಚಿಕೆ ಅನುಸರಿಸುವ ಮಾನದಂಡಗಳೇನು; ಕಳೆದ ಮೂರು ವರ್ಷಗಳ (೩೧ನೇ ಮಾರ್ಚ್ ೨೦೧೧ರವರೆಗೆ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಮತ್ತು ಇತರೆ ನಗರಗಳಲ್ಲಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ (ಬಿ.ಬಿ.ಎಂ.ಪಿ ಯಲ್ಲಿ ಬಡಾವಣೆವಾರು ಮತ್ತು ಇತರ ಪಟ್ಟಣಗಳ ಜಿಲ್ಲಾವಾರು ಪೂರ್ಣ ಮಾಹಿತಿಯನ್ನು ಒದಗಿಸುವುದು ಹಾಗೂ ಫಲಾನುಭವಿಗಳ ವಿವರ ನೀಡುವುದು) ?

## ವಸತಿ ರಹಿತರಿಗೆ ಮನೆ ಹಂಚಿಕೆ.

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೨೯೪ (೧೬೦೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ:-

(ಅ) ಸರ್ಕಾರದ ವಿವಿಧ ಯೋಜನೆಗಳಾದ ಬಸವ ವಸತಿ ಯೋಜನೆ, ಇಂದಿರಾ ಅವಾಜ್, ಅಂಬೇಡ್ಕರ್ ವಸತಿ ಯೋಜನೆ, ಗ್ರಾಮೀಣ ನಿವೇಶನ ಯೋಜನೆಗಳಲ್ಲಿ ವಸತಿ ರಹಿತ ಬಡವರಿಗೆ ವಸತಿ ನಿರ್ಮಾಣಕ್ಕೆ ಅನುದಾನ ಕೊಡುತ್ತಿರುವುದು ನಿಜವೇ; ಕಳೆದ ಎರಡು ವರ್ಷಗಳ ವರ್ಷವಾರು, ಜಿಲ್ಲಾವಾರು ಮತ್ತು ಜಾತಿವಾರು ಎಷ್ಟು ಮನೆಗಳನ್ನು ಹಂಚಲಾಗಿದೆ; (ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಗಾಣಿಗ ಸಮಾಜಕ್ಕೆ ಬೆಂಗಳೂರು ಗ್ರಾಮಾಂತರ, ಮಂಡ್ಯ, ಮೈಸೂರು, ಚಾಮರಾಜನಗರ, ಚಿಕ್ಕಮಗಳೂರು, ತುಮಕೂರು, ಕೋಲಾರ, ಶಿವಮೊಗ್ಗ, ಹಾಸನ, ರಾಮನಗರ, ಉಡುಪಿ, ಕೊಡಗು, ಉತ್ತರ ಕನ್ನಡ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಎಷ್ಟು ಮನೆಗಳನ್ನು ವಸತಿ ರಹಿತರಿಗೆ ಕೊಡಲಾಗಿದೆ (ಜಿಲ್ಲಾವಾರು ವಿವರವನ್ನು ಒದಗಿಸುವುದು) ?

## ಹಂಪಾಪುರದ ನಿವೇಶನಗಳ ಹಂಚಿಕೆ.

**ಶ್ರೀ ರಘುನಾಥ್‌ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):-**

೧೨೯೫ (೧೬೦೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕರ್ನಾಟಕ ಗೃಹ ಮಂಡಳಿ ಸಹಭಾಗಿತ್ವ ಯೋಜನೆಯಡಿ ನಿವೇಶನ ಅಭಿವೃದ್ಧಿಪಡಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಎಲ್ಲೆಲ್ಲಿ ಈ ರೀತಿಯ ಜಂಟಿ ಖಾಸಗಿ ಸಹಯೋಗದಲ್ಲಿ ಬಡಾವಣೆ ಯೋಜನೆ ರೂಪಿಸಲಾಗಿದೆ; ಜಿಲ್ಲಾವಾರು, ಬಡಾವಣೆವಾರು ಹಾಗೂ ಇದಕ್ಕೆ ಅನುಸರಿಸುವ ನಿಯಮ ಮಾನದಂಡ ಪ್ರಕ್ರಿಯೆಗಳೇನು; (ವಿವರ ಒದಗಿಸುವುದು)

(ಆ) ಅದರಂತೆ, ಬೆಂಗಳೂರು ತಾಲ್ಲೂಕು, ಕೆಂಗೇರಿ ಹೋಬಳಿ ಹಂಪಾಪುರ ಗ್ರಾಮದಲ್ಲಿ ಎಲ್ ಅಂಡ್ ಟಿ ಸಹಭಾಗಿತ್ವದಲ್ಲಿ ಈ ಯೋಜನೆ ಹಮ್ಮಿಕೊಳ್ಳಲಾಗಿದೆಯೇ; ಇದಕ್ಕಾಗಿ ಎಷ್ಟು ಎಕರೆ ಜಾಗವನ್ನು ವಶಪಡಿಸಿಕೊಳ್ಳಲಾಗಿದೆ; ಯಾವ ರೈತರುಗಳಿಂದ ಯಾವ ಅವಧಿಯಲ್ಲಿ ಭೂಮಿ ಪಡೆಯಲಾಗಿದೆ; ಇದರಲ್ಲಿ ಅಭಿವೃದ್ಧಿ ಪಡಿಸಿದ ನಿವೇಶನಗಳೆಷ್ಟು; ಹಂಚಿಕೆ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; ಅಳತೆವಾರು ನಿವೇಶನಕ್ಕೆ ನಿಗದಿಪಡಿಸಿದ ಮೊತ್ತವಾರು ವಿವರ ನೀಡುವುದು;

(ಇ) ಕೆ.ಹೆಚ್.ಬಿ. ಹಾಗೂ ಎಲ್ ಅಂಡ್ ಟಿ ಹಂಚಿಕೆ ಸಮಪಾಲೆಷ್ಟು; (ಈ ನಿಟ್ಟಿನಲ್ಲಿ ಅನುಸರಿಸಿದ ನಿಯಮ ತಿಳಿಸುವುದು) ದಿನಾಂಕ: ೨೬.೦೫.೨೦೧೨ರ ಕರಾರು ನಿಬಂಧನೆಗಳೇನು; ಬಡಾವಣೆ

ನಿವೇಶನದ ಯೋಜನಾ ನಕಾಶೆಯನ್ನು ಹಾಗೂ ಒಪ್ಪಂದ ಪ್ರತಿಯನ್ನು ಒದಗಿಸುವುದು; ಇತ್ತೀಚೆಗೆ ಬಡಾವಣೆ ನಕ್ಷೆಯನ್ನೇನಾದರೂ ಬದಲಾವಣೆ ಮಾಡಲಾಗಿದೆಯೇ; ಇದಕ್ಕೆ ಕಾರಣಗಳೇನು; (ಬದಲಾವಣೆ ಮಾಡಿದ ವಿವರ ನಕ್ಷೆ ಪ್ರತಿ ನೀಡುವುದು) ಮಾಡಿಕೊಂಡಿರುವ ಎಂ.ಓ.ಎ. ೪.೨ ರ ಷರತ್ತುಗಳೇನು;

(ಈ) ನಿವೇಶನ ದರ ನಿಗದಿಪಡಿಸುವ ಹಾಗೂ ಯೋಜನೆಯ ಮೂಲ ನಕಾಶೆ ಬದಲಾವಣೆ ಮಾಡುವ ಹಕ್ಕು ಯಾರಿಗಿದೆ; ಇದರಲ್ಲಿ ಕೆ.ಹೆಚ್.ಬಿ.ಯ ಪಾತ್ರವೇನು;

(ಉ) ಈ ಪೈಕಿ ಬಡಾವಣೆಯ ನಿರ್ಮಾಣಕ್ಕೆ ಪಡೆದ ಜಾಗದ ಭೂಮಾಲೀಕರಿಂದ ತಕರಾರು ಜಮೀನು ವ್ಯಾಜ್ಯಗಳು ದಾಖಲಾಗಿರುವುದು ನಿಜವೇ; ಸದರಿ ದೂರುಗಳನ್ನು ಇತ್ಯರ್ಥಪಡಿಸಿ ಸೂಕ್ತ ಪರಿಹಾರ ಮಂಜೂರು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು; ಅಂತಿಮ ಹಂತದಲ್ಲಿ ನಕ್ಷೆ ಬದಲಾವಣೆ ಮಾಡಲು ಈ ಜಾಗದ ವಿವಾದ ಕಾರಣವೇ; ಹಂಚಿಕೆ ಪಡೆದವರಿಗೆ ಹಕ್ಕು ಪರಭಾರೆ ಸಮಸ್ಯೆಗಳು ಉಂಟಾಗದಂತೆ ಯಾವ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ; ಮುಂದೇನಾದರೂ ನಿವೇಶನ ಭೂ ಸಮಸ್ಯೆಗಳು ಸಂಭವಿಸಿದಲ್ಲಿ, ಸೂಕ್ತವಾಗಿ ನಿರ್ವಹಿಸುವ ಜವಾಬ್ದಾರಿ ಯಾರದು; ಇದನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದೇ (ವಿವರಗಳನ್ನು ಒದಗಿಸುವುದು) ?

## ಸುವರ್ಣ ಗ್ರಾಮ ಯೋಜನೆ.

**ಶ್ರೀ ರಘುನಾಥ್‌ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೯೬ (೧೩೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯ ೬ ತಾಲ್ಲೂಕುಗಳಿಗೆ ಸುವರ್ಣ ಗ್ರಾಮ ಯೋಜನೆಯಡಿ ಯಾವ ಯಾವ ಹಳ್ಳಿಗಳನ್ನು ಆಯ್ಕೆ ಮಾಡಲಾಗಿರುತ್ತದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸುವರ್ಣ ಗ್ರಾಮ ಯೋಜನೆಯಡಿ ಆಯ್ಕೆಯಾದ ಹಳ್ಳಿಗಳಿಗೆ ನೀಡಿದ ಅನುದಾನ ಎಷ್ಟು ಮತ್ತು ಯಾವ ಲೆಕ್ಕಶೀರ್ಷಿಕೆ ಅಡಿಯಲ್ಲಿ ನೀಡಲಾಗಿದೆ (ಆ ಕಾಮಗಾರಿಗಳ ವಿವರ, ಗುತ್ತಿಗೆದಾರರ ಹೆಸರು, ಕಾಮಗಾರಿ ಪೂರ್ಣಗೊಳಿಸಿದ ದಿನಾಂಕದ ವಿವರ, ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ?

## ನಿರ್ಮಲ ಭಾರತ್ ಯೋಜನೆಯ ಪ್ರಗತಿ.

**ಶ್ರೀ ರಘುನಾಥ್‌ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೯೭ (೧೩೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರ್ಮಲ ಭಾರತ್ ಅಭಿಯಾನ ಯೋಜನೆಯಡಿ ಜಾರಿಗೊಳಿಸಿದ ವೈಯಕ್ತಿಕ ಶೌಚಾಲಯ ಕಾರ್ಯಕ್ರಮ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳೇನು; ಯೋಜನೆಯ ಪ್ರಗತಿ ವಿವರಗಳನ್ನು ಜಿಲ್ಲಾವಾರು ಒದಗಿಸುವುದು;

(ಆ) ಹಾಗೆಯೇ ಈ ಯೋಜನೆಗೆ ಲಭ್ಯವಾಗುವ ಸಹಾಯಧನ ಮೊತ್ತ ಎಷ್ಟು; ಇದನ್ನು ಯಾವ ರೂಪದಲ್ಲಿ ಫಲಾನುಭವಿಗೆ ನೀಡಲಾಗುತ್ತದೆ;

(ಇ) ಈ ಯೋಜನೆಯ ಹಣ ವಿತರಣೆಯಲ್ಲಿ ಅನೇಕ ಲೋಪದೋಷಗಳು ಕಂಡು ಬಂದಿರುವುದು ನಿಜವೇ; ಇದರ ನಿವಾರಣೆಗೆ ಏಕೀಕೃತ ಹಂತ ಅಳವಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಇದರಿಂದಾಗಿ ಯೋಜನೆ ವಿಫಲವಾಗುವ ಹಾಗೂ ಫಲಾನುಭವಿಗಳಿಗೆ ಮೊದಲೇ ಹಣ ಖರ್ಚು ಮಾಡಿ ನಂತರ ಮರುಪಾವತಿ ನಿಧಾನಗತಿಯ ಪರಿಣಾಮದಿಂದಾಗಿ ಫಲಾನುಭವಿಗಳು ಉತ್ಸಾಹ ತೋರದ ವಾತಾವರಣ ನಿರ್ಮಾಣವಾಗಿರುವುದು ಕಂಡುಬಂದಿದೆಯೇ;

(ಉ) ಹಾಗಿದ್ದಲ್ಲಿ, ನೇರವಾಗಿ ಫಲಾನುಭವಿಗಳಿಗೆ ಹಣ ಪಾವತಿ ಮಾಡಲು ಇರುವ ತೊಂದರೆಗಳೇನು (ವಿವರ ನೀಡುವುದು) ?

## ಪ್ರವಾಸಿ ತಾಣಗಳ ಅಭಿವೃದ್ಧಿ.

ಶ್ರೀ ರಘುನಾಥ್‌ರಾವ್ ಮಲ್ಕಾಪುರೆ (ವಿಧಾನ ಸಭೆಯಿಂದ ಚುನಾಯಿತರಾದವರು):–

೧೨೯೮ (೧೬೦೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ನೀಡಿರುವ ಅನುದಾನ ಮೊತ್ತವೆಷ್ಟು; (ವರ್ಷವಾರು ವಿವರಗಳನ್ನು ನೀಡುವುದು)

(ಆ) ಇದುವರೆಗೂ ಎಷ್ಟು ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸಲಾಗಿದೆ; (ಸ್ಥಳವಾರು ವಿವರ ನೀಡುವುದು) ;

(ಇ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಈವರೆಗೂ ಅಭಿವೃದ್ಧಿ ಪಡಿಸಿರುವ ಪ್ರವಾಸಿ ತಾಣಗಳಿಗೆ ವೆಚ್ಚ ಮಾಡಿರುವ ಮೊತ್ತವೆಷ್ಟು; (ತಾಲ್ಲೂಕುವಾರು, ವರ್ಷವಾರು ಪ್ರವಾಸಿ ತಾಣಗಳ ಮಾಹಿತಿ ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ಪ್ರವಾಸಿ ತಾಣಗಳಿಗೆ ಬರುವ ಪ್ರವಾಸಿಗರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಒದಗಿಸಲಾಗಿರುವ ಅನುದಾನದ ಮೊತ್ತ ಎಷ್ಟು (ಪ್ರವಾಸಿ ತಾಣಗಳವಾರು ವಿವರ ನೀಡುವುದು) ?

## ವೃದ್ಧರಿಗೆ ಹೆಚ್ಚಿನ ಆರೋಗ್ಯ ಸವಲತ್ತುಗಳು.

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೨೯೯ (೧೫೯೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ವೃದ್ಧರ ಸಂಖ್ಯೆ ಹೆಚ್ಚಾಗುತಿದ್ದು, ಹೆಚ್ಚಿನ ಆರೋಗ್ಯ ಸವಲತ್ತುಗಳನ್ನು ಕಲ್ಪಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವೃದ್ಧರ ಶ್ರೇಯಸ್ಸಿಗಾಗಿ ಮತ್ತು ಆರೈಕೆಗಾಗಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು (ವಿವರಗಳನ್ನು ನೀಡುವುದು) ;

(ಇ) ಯಶಸ್ವಿನಿ ಯೋಜನೆಯ ಕಾರ್ಯವ್ಯಾಪ್ತಿಯನ್ನು ವಿಸ್ತರಿಸಿ, ೬೦ ವರ್ಷ ಮೇಲ್ಪಟ್ಟಿರುವ ಎಲ್ಲಾ ವೃದ್ಧರಿಗೂ ಸೂಕ್ತ ವೈದ್ಯಕೀಯ ಚಿಕಿತ್ಸಾ ಸೌಲಭ್ಯ ಹೊಂದಲು ಅವಕಾಶ ಕಲ್ಪಿಸಲಾಗುವುದೇ ?

## ಬೆಳಗಾವಿ ಮಹಾನಗರ ರೈಲ್ವೇ ಮೇಲು ಸೇತುವೆ.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):–**

೧೩೦೦ (೧೫೯೫) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದ ಮಧ್ಯ ಭಾಗದಲ್ಲಿ ಇರುವ ರೈಲ್ವೇ ದಾರಿಗೆ ಅಡ್ಡಲಾಗಿ ಇರುವ ರಸ್ತೆಗಳಿಗೆ ಮೇಲ್ಸೇತುವೆ ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ಮತ್ತು ವಾಹನಗಳಿಗೆ ರೈಲ್ವೇ ಹಳಿ ದಾಟಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ರಸ್ತೆಗಳಿಗೆ ಮೇಲ್ಸೇತುವೆ ನಿರ್ಮಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ;

(ಆ) ಸದರಿ ಮೇಲ್ಸೇತುವೆ ನಿರ್ಮಿಸಲು ಅಂದಾಜು ಪತ್ರಿಕೆ ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಒಟ್ಟು ಎಷ್ಟು ಅಂದಾಜು ಮೊತ್ತ ತಗಲುತ್ತದೆ;

(ಇ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಿ, ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ಈ ಕಾಮಗಾರಿಗೆ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಬಿಡುಗಡೆ ಮಾಡಿದೆಯೇ; ಹಾಗಿದ್ದಲ್ಲಿ, ಯಾವಾಗ ಬಿಡುಗಡೆ ಮಾಡಿದೆ;

(ಈ) ರಾಜ್ಯ ಸರ್ಕಾರವು ತನ್ನ ಪಾಲಿನ ಹಣವನ್ನು ಯಾವಾಗ ಬಿಡುಗಡೆ ಮಾಡುವುದು ?

## ಆರ್. ಎಂ. ಎಸ್. ಎ ಯೋಜನೆಯಡಿ ಪ್ರೌಢ ಶಾಲೆಗಳ ನಿರ್ಮಾಣ.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೩೦೧ (೧೫೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಜಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶಿಕ್ಷಣ ಇಲಾಖೆಯ ಆರ್.ಎಂ.ಎಸ್.ಎ ಯೋಜನೆಯಡಿ ಎಷ್ಟು ಪ್ರೌಢ ಶಾಲೆಗಳನ್ನು ಯಾವ ಯಾವ ಊರು (ತಾಲ್ಲೂಕುವಾರು) ಗಳಲ್ಲಿ ನಿರ್ಮಿಸಲಾಗುತ್ತಿದೆ;

(ಆ) ಯಾವ ಯಾವ ಶಾಲೆಯ ಗುತ್ತಿಗೆಯನ್ನು ಯಾರು ಯಾರಿಗೆ ಎಷ್ಟು ಮೊತ್ತದ ಗುತ್ತಿಗೆಯಲ್ಲಿ ನೀಡಲಾಗಿದೆ; (ಶಾಲಾವಾರು ವಿವರ ನೀಡುವುದು) ಇವುಗಳ ಮೇಲು ಉಸ್ತುವಾರಿ ಯಾರದ್ದು;

(ಇ) ಯಾವ ಮಿತಿಯ ಒಳಗಡೆ ಕಾಮಗಾರಿಗಳು ಪೂರ್ಣಗೊಳ್ಳಬೇಕಾಗಿದೆ (ಪ್ರತಿ ಶಾಲಾವಾರು, ಕಾಮಗಾರಿವಾರು ಅಭಿವೃದ್ಧಿಯ ವಿವರ ನೀಡುವುದು) ?

## ಪದವಿ ಕಾಲೇಜುಗಳಲ್ಲಿನ ಹುದ್ದೆಗಳು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೧೩೦೨ (೧೫೫೪) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಕ್ಕಾಗಿ ತೆರವಾಗುವ ಕನ್ನಡ ಉಪನ್ಯಾಸಕರ ಹುದ್ದೆಗಳನ್ನು ಬೇರೆ ರಾಜ್ಯಗಳ ರೀತಿಯಲ್ಲಿ ವಿಶೇಷ ಕ್ರಮ ವಹಿಸಿ ತಕ್ಷಣ ಭರ್ತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ; ರಾಜ್ಯದಲ್ಲಿ ಕನ್ನಡ ಉಳಿವಿಗಾಗಿ ಈ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರದ ನಿಲುವೇನು;

(ಆ) ಬಿಜಾಪೂರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಈ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯು.ಜಿ.ಸಿ., ಯು.ಜಿ.ಸಿ.ಯೇತರ, ಅನುದಾನ ರಹಿತ ಹುದ್ದೆಗಳಲ್ಲಿ ಯಾವ ಯಾವ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ; ಈ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ಕ್ರಮವೇನು;

(ಇ) ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಅಡಿಯಲ್ಲಿ ಎಷ್ಟು ಪದವಿ ಕಾಲೇಜುಗಳು ಸೇರ್ಪಡೆಗೊಂಡಿವೆ; ಈ ವಿಶ್ವ ವಿದ್ಯಾಲಯವು ಮೂಲಭೂತ ಸೌಲಭ್ಯಗಳಿಂದ ಬಳಲುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

(ಈ) ಕರ್ನಾಟಕ ವಿಶ್ವವಿದ್ಯಾಲಯದ ಮೌಲ್ಯಮಾಪನ ಸಂದರ್ಭದಲ್ಲಿ ಕೊಡುವ ಮೌಲ್ಯಮಾಪನ ಸಂಭಾವನೆ, ಭತ್ಯೆ ಹಾಗೂ ರಾಣಿಚೆನ್ನಮ್ಮ ವಿಶ್ವವಿದ್ಯಾಲಯದ ಮೌಲ್ಯಮಾಪನ ಸಂಭಾವನೆ, ಭತ್ಯೆಗೂ ಇರುವ ವ್ಯತ್ಯಾಸವೇನು; ಈ ವ್ಯತ್ಯಾಸಕ್ಕೆ ಕಾರಣಗಳೇನು; ಈ ಸಮಸ್ಯೆಯನ್ನು ಸರಿಪಡಿಸಲು ತೆಗೆದುಕೊಂಡಿರುವ ಕ್ರಮವೇನು ?

## ವೃತ್ತಿಪರ ಶಿಕ್ಷಣ ಪ್ರವೇಶಕ್ಕೆ ಶುಲ್ಕ ವಸೂಲಿ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೩೦೩ (೧೫೯೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ವರ್ಗದ, ನಿಗದಿತ ಆದಾಯ ಮಿತಿಯೊಳಗೆ ಇರುವ ವಿದ್ಯಾರ್ಥಿಗಳಿಗೆ ವೃತ್ತಿಪರ ಶಿಕ್ಷಣಕ್ಕೆ ಸಿ.ಇ.ಟಿ ಮೂಲಕ ಪ್ರವೇಶ ಪಡೆದು, ಶುಲ್ಕ ರಹಿತವಾಗಿ ಪ್ರವೇಶ ಪಡೆದರೂ ಖಾಸಗಿ ಕಾಲೇಜಿನವರು ಈ ವಿದ್ಯಾರ್ಥಿಗಳ ಹತ್ತಿರ ಶುಲ್ಕವನ್ನು ಕಟ್ಟಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಿ.ಇ.ಟಿ. ಪ್ರವೇಶ ನೀಡಿದ ದಾಖಲೆಯಲ್ಲಿ ಸೊನ್ನೆ ಶುಲ್ಕ ಎಂದು ತೋರಿಸಿದ್ದರೂ ಖಾಸಗಿ ಕಾಲೇಜಿನವರು ಈ ವರ್ಗದ ವಿದ್ಯಾರ್ಥಿಗಳ ಹತ್ತಿರ ಶುಲ್ಕ ಪಡೆಯಲು ಕಾರಣವೇನು;

(ಇ) ಈ ಶುಲ್ಕವನ್ನು ವಸೂಲು ಮಾಡದಂತೆ, ಮತ್ತು ಈಗ ವಸೂಲು ಮಾಡಿರುವ ಶುಲ್ಕವನ್ನು ಕೂಡಲೇ ಹಿಂದಿರುಗಿಸುವಂತೆ ಸರ್ಕಾರ ಆದೇಶ ನೀಡುವುದೇ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ.03381/1000 ಪ್ರತಿಗಳು/16-07-2014